ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 208 RNI Number : KNKAN/25/A2770 08-08-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :208 ರಾಯಚೂರು 08-08-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ರೈತರಿಗೆ ₹50 ಸಾವಿರ ಬರ ಪರಿಹಾರ, ಸಾಲಮನ್ನಾ ಮಾಡಿ: ಸರ್ಕಾರಕ್ಕೆ ಶಾಸಕ ಶಿವರಾಜ ಪಾಟೀಲ ಆಗ್ರಹ



ರಾಯಚೂರು,ಆ.7-

ಜಿಲ್ಲೆಯಲ್ಲಿ ಮುಂದುವರಿದಿರುವ ಬರ ಪರಿಸ್ಥಿತಿಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕೃಷಿಗೆ ಮಾಡಿದ ವೆಚ್ಚವೂ ವಾಪಸ್ ಸಿಗದ ಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ ರಾಜ್ಯ ಸರ್ಕಾರ ಕೂಡಲೇ ಪ್ರತಿ ಎಕರೆಗೆ ಕನಿಷ್ಠ ₹50 ಸಾವಿರ ಬರ ಪರಿಹಾರ ಘೋಷಿಸುವುದರ ಜತೆಗೆ ರೈತರ ಸಾಲಮನ್ನಾ ಮಾಡಿ ಅಗತ್ಯ ನೆರವು ನೀಡಬೇಕು ಎಂದು ಶಾಸಕ ಶಿವರಾಜ ಪಾಟೀಲ ಆಗ್ರಹಿಸಿದರು.

ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಈಗಾಗಲೇ ಅನೇಕ ರೈತರು ಮೂರು ಬಾರಿ ಬಿತ್ತನೆ ಮಾಡಿದ್ದು, ಪ್ರತಿ ಎಕರೆಗೆ ₹15 ಸಾವಿರಕ್ಕೂ ಅಧಿಕ ವೆಚ್ಚವಾಗಿದೆ. ಆದರೆ ನಿರೀಕ್ಷಿತ ಮಳೆಯಾಗದೆ ಬೆಳೆ ಸಂಪೂರ್ಣ ಹಾನಿಗೊಳಗಾಗಿದ್ದು, ರೈತರು ಸಾಲದ ಸುಳಿಗೆ ಸಿಲುಕಿದ್ದಾರೆ. ಸರ್ಕಾರ ತಕ್ಷಣ ಬೆಳೆ ಹಾನಿ ಸಮೀಕ್ಷೆ ನಡೆಸಿ, ನಷ್ಟಕ್ಕನುಗುಣವಾಗಿ ಪರಿಹಾರ ವಿತರಿಸಬೇಕು ಎಂದು ಒತ್ತಾಯಿಸಿದರು.

ರೈತರು ದೇಶದ ಬೆನ್ನೆಲುಬು. ಆದರೆ ಕೃಷಿ ಲಾಭದಾಯಕವಾಗದ ಕಾರಣ ಗ್ರಾಮೀಣ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ. ಮಕ್ಕಳನ್ನು ಉದ್ಯೋಗ ಅರಸಿ ಬೆಂಗಳೂರಿನಂತಹ ನಗರಗಳಿಗೆ ಕಳುಹಿಸುವ ಅನಿವಾರ್ಯ ಪರಿಸ್ಥಿತಿ

3 ನೇ ಪುಟಕ್ಕೆ

ಆ.10ಕ್ಕೆ ರಾಯಚೂರಿನಲ್ಲಿ ಕಾರ್ಮಿಕ-ರೈತರ ಶಕ್ತಿ ಪ್ರದರ್ಶನ

ಅಂಬೇಡ್ಕರ್ ವೃತ್ತದಿಂದ ಟಿಪ್ಪು ಗಾರ್ಡನ್‌ವರೆಗೆ ಬೃಹತ್ ಮೆರವಣಿಗೆ-ಧರಣಿ



ರಾಯಚೂರು,ಆ.7-

ಕಾರ್ಮಿಕ ರೈತರ ಹಕ್ಕುಗಳ ರಕ್ಷಣೆ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಆ.10ರಂದು ರಾಯಚೂರು ನಗರದಲ್ಲಿ ಬೃಹತ್ ಕಾರ್ಮಿಕ ರೈತ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧ್ಯಕ್ಷ ಜಿ. ಅಡವಿರಾವ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಕಾರ್ಮಿಕ ಸಂಘಟನೆಗಳು ಹಾಗೂ ಸಂಯುಕ್ತ ಕಿಸಾನ್ ಮೋರ್ಚಾ ಕರೆ ನೀಡಿರುವ ಅಖಿಲ ಭಾರತ ಕಾರ್ಮಿಕ ರೈತ ಹೋರಾಟದ ಅಂಗವಾಗಿ ಟಿಯುಸಿಐ ಮತ್ತು ಕರ್ನಾಟಕ ರೈತ ಸಂಘ ಎಐಕೆಕೆಎಸ್ ಜಂಟಿಯಾಗಿ ಹೋರಾಟ ನಡೆಸಲಿವೆ ಎಂದರು.

ಆ.10ರಂದು ಬೆಳಗ್ಗೆ 11 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಬೃಹತ್ ಮೆರವಣಿಗೆ ಆರಂಭವಾಗಲಿದೆ. ನಗರದ ವಿವಿಧ ರಸ್ತೆಗಳಲ್ಲಿ ಸಂಚರಿಸಿ ಟಿಪ್ಪು ಸುಲ್ತಾನ್ ಗಾರ್ಡನ್‌ನಲ್ಲಿ ಬಹಿರಂಗ ಸಭೆ ಹಾಗೂ ಧರಣಿ ನಡೆಸಲಾಗುವುದು. ಜಿಲ್ಲೆಯ ವಿವಿಧ ಕಾರ್ಮಿಕ ಮತ್ತು ರೈತ ಸಂಘಟನೆಗಳ ಸಾವಿರಾರು ಮಂದಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ನಾಲ್ಕು ಕಾರ್ಮಿಕ ಸಂಹಿತೆಗಳನ್ನು ರದ್ದುಪಡಿಸಿ, ಗುತ್ತಿಗೆ-ಹೊರಗುತ್ತಿಗೆ ಪದ್ಧತಿಯನ್ನು ನಿಲ್ಲಿಸಬೇಕು. ಕಾರ್ಮಿಕರಿಗೆ ಉದ್ಯೋಗ ಹಾಗೂ ಸಾಮಾಜಿಕ ಭದ್ರತೆ ಕಲ್ಪಿಸಿ ಕನಿಷ್ಠ ₹35 ಸಾವಿರ ವೇತನ ಖಾತರಿಪಡಿಸಬೇಕು. ರಾಜ್ಯ ಸರ್ಕಾರ ತಡೆಹಿಡಿದಿರುವ ಮೇ 22ರ ಪರಿಷ್ಕೃತ ವೇತನವನ್ನು ಕೂಡಲೇ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ಕೇಂದ್ರದ ವಿದ್ಯುತ್ ಬಿಲ್-2025ನ್ನು ರದ್ದುಪಡಿಸಿ ವಿದ್ಯುತ್ ಕ್ಷೇತ್ರವನ್ನು ಕಾರ್ಪೊರೇಟ್ ಕಂಪನಿಗಳಿಗೆ ಒಪ್ಪಿಸುವುದನ್ನು ನಿಲ್ಲಿಸಬೇಕು. ಕಾರ್ಪೊರೇಟ್ ಕಂಪನಿಗಳಿಂದ ಕೃಷಿ ಭೂಮಿಯ ಅಕ್ರಮ ಕಬಳಿಕೆ ತಡೆಯಬೇಕು. ಸರ್ಕಾರಿ, ಅರಣ್ಯ ಹಾಗೂ ಹೆಚ್ಚುವರಿ ಭೂಮಿಯನ್ನು ಭೂಹೀನ ದಲಿತರು ಮತ್ತು ಬಡವರಿಗೆ ವಿತರಿಸಬೇಕು ಎಂದು

3 ನೇ ಪುಟಕ್ಕೆ

''ಸಾಂಸ್ಕೃತಿಕ ವೈಭವಕ್ಕೆ ರಾಗ-ರಂಗ ವೇದಿಕೆ ಸಜ್ಜು''

ಧರೆಗಿಳಿದು ಬಂದ ಪರಮಾತ್ಮ ನಾಟಕ ಪ್ರದರ್ಶನ; ಭಕ್ತಿ-ಸುಗಮ ಸಂಗೀತ, ದಾಸವಾಣಿ, ತತ್ವಪದಗಳ ಗಾಯನ



ರಾಯಚೂರು,ಆ.7-

ಕಲೆ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ರಾಗ-ರಂಗ ಸಾಂಸ್ಕೃತಿಕ ಕಲಾ ವೇದಿಕೆ (ರಿ), ರಾಯಚೂರು ವತಿಯಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ವೇದಿಕೆಯ ಅಧ್ಯಕ್ಷ ಪಂಪಾಪತಿ ಹೂಗಾರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಗರದ ಬೋಳಮಾನ ದೊಡ್ಡಿ ರಸ್ತೆಯಲ್ಲಿರುವ ಸರ್ಕಾರಿ ನಿವೃತ್ತ ನೌಕರರ ಸಂಘದ ಸಭಾಂಗಣದಲ್ಲಿ ಬೆಳಗ್ಗೆ 11 ಗಂಟೆಗೆ ಕಾರ್ಯಕ್ರಮ ನಡೆಯಲಿದೆ. ನಿವೃತ್ತ ನೌಕರರ ಸಂಘದ ಅಧ್ಯಕ್ಷ ಮಹಾದೇವಪ್ಪ ವಿಗನೂರು ಉದ್ಘಾಟಿಸಲಿದ್ದು, ತಾವು ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಧರೆಗಿಳಿದು ಬಂದ ಪರಮಾತ್ಮ ನಾಟಕ ಪ್ರಮುಖ ಆಕರ್ಷಣೆಯಾಗಲಿದೆ. ಇದರೊಂದಿಗೆ ಭಕ್ತಿ ಸಂಗೀತ, ಸುಗಮ ಸಂಗೀತ, ಭಾವಗೀತೆಗಳು, ದಾಸವಾಣಿ, ತತ್ವಪದಗಳು ಹಾಗೂ ಜ್ಞಾನ ವಚನಗಳ ಮೂಲಕ ಕನ್ನಡದ ಸಾಂಸ್ಕೃತಿಕ ಪರಂಪರೆಯನ್ನು ಪರಿಚಯಿಸಲಾಗುವುದು ಎಂದು ಹೇಳಿದರು.

ನಾಟಕದಲ್ಲಿ ನರಸಿಂಹ ಚಿಕ್ಕಸೂಗೂರು ಅವರು ಪರಮಾತ್ಮನ ಪಾತ್ರ ನಿರ್ವಹಿಸಲಿದ್ದು, ದೇವಣ್ಣ

3 ನೇ ಪುಟಕ್ಕೆ

2026 ಮತದಾರ ಪಟ್ಟಿ ಪರಿಷ್ಕರಣೆ 100% ಪೂರ್ಣ - ಅಶೋಕ ಪವಾರ



ಸಿರವಾರ,ಆ.7-

2026 ಮತದಾರ ಪಟ್ಟಿ ಪರಿಷ್ಕರಣೆ ಪ್ರಾರಂಭವಾಗಿ 1 ತಿಂಗಳು, 7 ದಿನಗಳು ಕಳೆದಿದ್ದೂ, ಮಾನ್ವಿ ವಿಧಾನಸಭಾ ಕ್ಷೇತ್ರದ (55) ಶೇ.100% ನೊಂದಣಿ ಪ್ರಕ್ರಿಯೆ ಪೂರ್ಣಗೊಂಡಿದೆ ಎಂದು ತಹಸೀಲ್ದಾರ ಹಾಗೂ ತಾಲೂಕ ದಂಡಾಧಿಕಾರಿಗಳಾದ ಅಶೋಕಪವಾರ ಅವರು ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಮಾನ್ವಿ ವಿಧಾನ ಸಭಾ ಕ್ಷೇತ್ರ ಸಂಖ್ಯೆ 55 ರಲ್ಲಿ ಒಟ್ಟು 276 ಭಾಗಗಳನ್ನು ಹೊಂದಿದ್ದೂ, 2,45,968 ಮತದಾರರನ್ನು ಹೊಂದಿದೆ, 2,45,968 ಮತದಾರರಿಗೆ ಎನಿಮಿರೇಷನ್ ಪತ್ರ ನೀಡಲಾಗಿದೆ. 1,99,374(81.06%) ಇಎಪ್ ಎಸ್ ಡಿಜಿಟಲೈಸ್ಡ್ ಮಾಡಲಾಗಿದೆ.

ಪೂರ್ಣಗೊಂಡಿರುವುದಕ್ಕೆ ಆ ನೊಂದಣಿದಾರರಿಗೆ ಅಭಿನಂದನೆಗಳು ಎಂದಿದ್ದಾರೆ. ಚುನಾಚಣೆ ಆಯೋಗವು ಜೂನ್ 30 ರಿಂದ ಮತದಾರ ಪರಿಷ್ಕರಣೆಗೆ ಚಾಲನೆ ನೀಡಲಾಗಿತು. ಜುಲೈ 30 ಕೊನೆಯ ದಿನವಾಗಿತು, ಅದನ್ನು ವಿಸ್ತರಣೆ ಮಾಡಲಾಗಿದ್ದೂ, ಅಗಷ್ಟ್ 8 ಕೊನೆಯ ದಿನವಾಗಿದೆ, ಕರಡು

3 ನೇ ಪುಟಕ್ಕೆ

ಆ.9ರಂದು ಪ್ರತಿಭಾ ಪುರಸ್ಕಾರ, ಮೀಸಲಾತಿ ವಿಚಾರ ಸಂಕಿರಣ: ವೆಂಕಟೇಶ ನಾಯಕ ಅಸ್ಕಿಹಾಳ



ರಾಯಚೂರು,ಆ.7-

ಎಸ್‌ಸಿ, ಎಸ್‌ಟಿ ಹಾಗೂ ಒಬಿಸಿ ಸಮುದಾಯಗಳಿಗೆ ಶೇ.56ರಷ್ಟು ಮೀಸಲಾತಿ ಕಲ್ಪಿಸುವ ಕಾನೂನನ್ನು ಸಂವಿಧಾನದ 9ನೇ ಅನುಸೂಚಿಗೆ ಸೇರಿಸುವ ಕುರಿತು ಆಗಸ್ಟ್ 9ರಂದು ರಾಯಚೂರಿನಲ್ಲಿ ಮಹತ್ವದ ವಿಚಾರ ಸಂಕಿರಣ ನಡೆಯಲಿದೆ ಎಂದು ಅಖಿಲಾಂಡ ಶ್ರೀ ಮಹರ್ಷಿ ವಾಲ್ಮೀಕಿ ನಾಯಕ ಸಂಘ ಕಲ್ಯಾಣ ಕರ್ನಾಟಕದ ರಾಜ್ಯಾಧ್ಯಕ್ಷ ವೆಂಕಟೇಶ ನಾಯಕ ಅಸ್ಕಿಹಾಳ ತಿಳಿಸಿದರು.

ನಗರದ ಪಂ. ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಅಂದು ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ, ಸಾಧಕರಿಗೆ ಸನ್ಮಾನ ಹಾಗೂ ಮೀಸಲಾತಿ ಕುರಿತು ವಿಚಾರ ಸಂಕಿರಣ ಆಯೋಜಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90 ಹಾಗೂ ಅದಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೂ ಸನ್ಮಾನ ನಡೆಯಲಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿವಿಧ ಮಠಾಧೀಶರ ದಿವ್ಯ ಸಾನಿಧ್ಯದಲ್ಲಿ ನಡೆಯುವ ಕಾರ್ಯಕ್ರಮವನ್ನು ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ರಾಯಚೂರು ಗ್ರಾಮೀಣ ಶಾಸಕ ಬಸನಗೌಡ

3 ನೇ ಪುಟಕ್ಕೆ

ಬರದ ಬಿಸಿಗೆ ಸರ್ಕಾರದ ಚುರುಕು; ರಾಯಚೂರಿನಲ್ಲಿ ಸಚಿವ ಅಜಯ್ ಧರ್ಮಸಿಂಗ್ ಪರಿಶೀಲನೆ

ಬೆಳೆ ಹಾನಿ, ಕುಡಿಯುವ ನೀರು, ಅಂತರ್ಜಲ ಕುಸಿತದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಸಂಗ್ರಹ



ರಾಯಚೂರು,ಆ.7-

ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿ, ಬೆಳೆ ಹಾನಿ, ಕುಡಿಯುವ ನೀರಿನ ಸಮಸ್ಯೆ ಹಾಗೂ ಅಂತರ್ಜಲ ಮಟ್ಟದ ಕುಸಿತದ ಕುರಿತು ಸಮಗ್ರ ಪರಿಶೀಲನೆ ನಡೆಸಲು ಸಂಪುಟ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ಶುಕ್ರವಾರ ರಾಯಚೂರು ಜಿಲ್ಲೆಗೆ ಆಗಮಿಸಿ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿರ್ದೇಶನದಂತೆ ಆ.7 ಮತ್ತು 8ರಂದು ಎರಡು ದಿನಗಳ ಜಿಲ್ಲಾ ಪ್ರವಾಸ ಕೈಗೊಂಡಿರುವ ಸಚಿವರು, ಮೊದಲ ದಿನ ರಾಯಚೂರು ಗ್ರಾಮಾಂತರ, ದೇವದುರ್ಗ, ಲಿಂಗಸುಗೂರು ಹಾಗೂ ಮಸ್ಕಿ ತಾಲೂಕುಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿಯ ಸ್ಥಳ ಪರಿಶೀಲನೆ ನಡೆಸಿದರು. ಬಳಿಕ ರಾಯಚೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಜಿಲ್ಲಾಧಿಕಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಜಿಲ್ಲೆಯ ವಾಸ್ತವ ಪರಿಸ್ಥಿತಿಯ ಕುರಿತು ಮಾಹಿತಿ ಪಡೆದರು.

ಸಭೆಯಲ್ಲಿ ಜಿಲ್ಲೆಯ ಹಲವು ಭಾಗಗಳಲ್ಲಿ ಮಳೆ ಕೊರತೆಯಿಂದ ಹತ್ತಿ, ಭತ್ತ ಸೇರಿದಂತೆ ಮುಂಗಾರು ಬೆಳೆಗಳು ಹಾನಿಗೊಳಗಾಗಿರುವ ಬಗ್ಗೆ ಅಧಿಕಾರಿಗಳು ವರದಿ ಸಲ್ಲಿಸಿದರು. ಮಳೆ ಕೊರತೆಯ ಪರಿಣಾಮ ಅಂತರ್ಜಲ ಮಟ್ಟವೂ ಗಣನೀಯವಾಗಿ ಕುಸಿದಿದೆ. ಪ್ರಸ್ತುತ ಪರಿಸ್ಥಿತಿಯಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ತೀವ್ರ ಸಮಸ್ಯೆ ಇಲ್ಲ ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಸಚಿವರಿಗೆ ಮಾಹಿತಿ ನೀಡಿದರು.

ರೈತರ ಸಮಸ್ಯೆಗಳ ಕುರಿತು ಸಚಿವರು ಅಧಿಕಾರಿಗಳಿಂದ ಬೆಳೆ ಹಾನಿ, ನೀರಿನ ಲಭ್ಯತೆ ಸೇರಿದಂತೆ

3 ನೇ ಪುಟಕ್ಕೆ

ಮೂರು ಬಾರಿ ಬಿತ್ತನೆ; ಎಕರೆಗೆ ₹25 ಸಾವಿರ ಖರ್ಚು: ಹತ್ತಿ ರೈತರಿಗೆ ಪರಿಹಾರ ನೀಡಿ -ಬಸನಗೌಡ ದದ್ದಲ್



ರಾಯಚೂರು,ಆ.7-

ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಹತ್ತಿ ಬೆಳೆ ತೀವ್ರ ಹಾನಿಗೊಳಗಾಗಿದ್ದು, ರೈತರು ಭಾರೀ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಹತ್ತಿ ಬೆಳೆ ಹಾನಿಯ ಸಮಗ್ರ ಸಮೀಕ್ಷೆ ನಡೆಸಿ ರೈತರಿಗೆ ತಕ್ಷಣ ಸೂಕ್ತ ಪರಿಹಾರ ನೀಡಬೇಕು ಎಂದು ರಾಯಚೂರು ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಸರ್ಕಾರವನ್ನು ಒತ್ತಾಯಿಸಿದರು.

ಜಿಲ್ಲೆಯ ಅನೇಕ ರೈತರು ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ಒಂದೇ ಹಂಗಾಮಿನಲ್ಲಿ ಮೂರು ಬಾರಿ ಹತ್ತಿ ಬಿತ್ತನೆ ಮಾಡಿದ್ದು, ಪ್ರತಿ ಎಕರೆಗೆ ಸುಮಾರು ₹25 ಸಾವಿರದವರೆಗೆ ಖರ್ಚು ಮಾಡಿದ್ದಾರೆ. ರಸಗೊಬ್ಬರ, ಕೀಟನಾಶಕ, ಬೀಜ ಹಾಗೂ ಇತರೆ ಕೃಷಿ ವೆಚ್ಚಗಳಿಂದ ರೈತರ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಬಿದ್ದಿದೆ. ಆದರೆ ನಿರೀಕ್ಷಿತ ಮಳೆ ಬಾರದ ಪರಿಣಾಮ ಬೆಳೆ ಒಣಗಿ ಹೋಗಿ ರೈತರು ನಷ್ಟ ಅನುಭವಿಸುವಂತಾಗಿದೆ ಎಂದು ಅವರು ಹೇಳಿದರು.


ಜಿಲ್ಲೆಯಲ್ಲಿ ಬರ ಪರಿಸ್ಥಿತಿ ತೀವ್ರವಾಗಿದ್ದು, ಬೆಳೆಗಳು ಸಂಪೂರ್ಣವಾಗಿ ಹಾನಿಗೊಳಗಾಗಿರುವ ಪ್ರದೇಶಗಳಲ್ಲಿ ತಕ್ಷಣವೇ ಬೆಳೆ ಹಾನಿ ಸಮೀಕ್ಷೆ ನಡೆಸಬೇಕು. ವಾಸ್ತವ ನಷ್ಟವನ್ನು ಆಧರಿಸಿ ಅರ್ಹ ರೈತರಿಗೆ ಸರ್ಕಾರ ಸೂಕ್ತ ಪರಿಹಾರ ಘೋಷಿಸಿ, ಶೀಘ್ರವಾಗಿ ಬಿಡುಗಡೆ ಮಾಡಬೇಕು ಎಂದು ದದ್ದಲ್ ಆಗ್ರಹಿಸಿದರು.

3 ನೇ ಪುಟಕ್ಕೆ

ಬರದಿಂದ ಶೇ.90ರಷ್ಟು ಬೆಳೆ ನಷ್ಟ:ಪರಿಹಾರಕ್ಕಾಗಿ ಸರ್ಕಾರದಿಂದ ಸೂಕ್ತ ನಿರ್ಧಾರ

ದೇವದುರ್ಗ, ಲಿಂಗಸುಗೂರು ಕ್ಷೇತ್ರಗಳಲ್ಲಿ ಬರ ವೀಕ್ಷಣೆ; ರೈತರ ಸಂಕಷ್ಟ ಆಲಿಸಿದ ಸಚಿವ





ರಾಯಚೂರು,ಆ.7-

ಜಿಲ್ಲೆಯಲ್ಲಿ ತೀವ್ರಗೊಂಡಿರುವ ಬರ ಪರಿಸ್ಥಿತಿಯಿಂದ ಹತ್ತಿ, ಸೂರ್ಯಕಾಂತಿ, ತೊಗರಿ ಸೇರಿದಂತೆ ವಿವಿಧ ಬೆಳೆಗಳಿಗೆ ಭಾರೀ ಹಾನಿಯಾಗಿದ್ದು, ಸುಮಾರು 2.27 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿರುವ ಬೆಳೆಗಳಲ್ಲಿ ಶೇ.90ರಷ್ಟು ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ಶುಕ್ರವಾರ ಜಿಲ್ಲೆಯ ವಿವಿಧ ವಿಧಾನಸಭಾ ಕ್ಷೇತ್ರಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿಯನ್ನು ಖುದ್ದು ಪರಿಶೀಲಿಸಿದರು.

ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಯಕ್ಲಾಸಪುರ ಸೀಮಾಂತರದ ಸರ್ವೇ ನಂ.179 ಮತ್ತು 180ರ ಜಮೀನುಗಳಿಗೆ ಭೇಟಿ ನೀಡಿದ ಸಚಿವರು, ಹೊಲದಲ್ಲಿನ ಹತ್ತಿ ಹಾಗೂ ತೊಗರಿ ಬೆಳೆಗಳ ಸ್ಥಿತಿಗತಿಯನ್ನು ವೀಕ್ಷಿಸಿದರು. ಮಳೆ ಹಾಗೂ ನೀರಿನ ಕೊರತೆಯಿಂದ ಬೆಳೆಗಳ ಬೆಳವಣಿಗೆ ಕುಂಠಿತವಾಗಿರುವ ಕುರಿತು ರೈತರು ಸಚಿವರಿಗೆ ಮಾಹಿತಿ ನೀಡಿದರು.

''ಮಳೆಯಿಲ್ಲದೆ ಹಾಗೂ ನೀರಿನ ಅಭಾವದಿಂದ ಕಷ್ಟಪಟ್ಟು ಬಿತ್ತನೆ ಮಾಡಿದ ಬೆಳೆ ಒಣಗಿದೆ. ಫಸಲು ಕೈಗೆ ಸಿಗದೆ ಸಂಕಷ್ಟಕ್ಕೆ ಸಿಲುಕಿದ್ದೇವೆ. ಸರ್ಕಾರ ನಮ್ಮ ನೆರವಿಗೆ ಬರಬೇಕು'' ಎಂದು ರೈತರು ಸಚಿವರಿಗೆ ಮನವಿ ಮಾಡಿದರು.

ರೈತರ ಅಹವಾಲು ಆಲಿಸಿದ ಸಚಿವರು, ಮುಖ್ಯಮಂತ್ರಿಗಳ ಸೂಚನೆಯಂತೆ ಜಿಲ್ಲೆಯಾದ್ಯಂತ ಬರ ಪರಿಸ್ಥಿತಿಯ ವಾಸ್ತವಿಕ ಸ್ಥಿತಿಯನ್ನು ಖುದ್ದು ಪರಿಶೀಲಿಸಲಾಗುತ್ತಿದೆ. ಮಳೆ ಹಾಗೂ ಬೆಳೆ ಪರಿಸ್ಥಿತಿಯ ಕುರಿತು ವರದಿ ಸಲ್ಲಿಸಿದ ಬಳಿಕ ಸರ್ಕಾರ ಸೂಕ್ತ ನಿರ್ಧಾರ ಕೈಗೊಂಡು ಪರಿಹಾರ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ನಂತರ ಸಾತ್ ಮೈಲಿಬಿಳಿಯ ಹುಣಸಿಹಾಳಹುಡ್ ಸೀಮಾಂತರದ ಸರ್ವೇ ನಂ.30(1)ರ ಜಮೀನಿಗೆ ಭೇಟಿ ನೀಡಿ ಹತ್ತಿ ಬೆಳೆಯನ್ನು ಪರಿಶೀಲಿಸಿದರು. ಈ ವೇಳೆ ಮಾತನಾಡಿದ ಸಚಿವರು, ರಾಜ್ಯದಲ್ಲಿ ರೈತರ ಸಮಸ್ಯೆಗಳು ತೀವ್ರಗೊಂಡಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಹಾಗೂ

3 ನೇ ಪುಟಕ್ಕೆ

ಎಲ್ಲರೂ ಒಗ್ಗೂಡಿ ಸರ್ಕಾರದ ಕಾರ್ಯಕ್ರಮಗಳ ಜಾರಿ ಮಾಡುತ್ತೇವೆ: ಸಚಿವರಾದ ಬಸವರಾಜ ರಾಯರಡ್ಡಿ

ಕೊಪ್ಪಳ ಆ.07

ಕೊಪ್ಪಳ ಜಿಲ್ಲೆಯಲ್ಲಿ ಸಚಿವರಾದ ಶಿವರಾಜ ತಂಗಡಗಿ, ಶಾಸಕರಾದ ರಾಘವೇಂದ್ರ ಹಿಟ್ನಾಳ ಹಾಗೂ ಇನ್ನುಳಿದ ಎಲ್ಲ ಶಾಸಕರು ಮತ್ತು ಪಕ್ಷದ ಎಲ್ಲ ಹಿರಿಯ-ಕಿರಿಯ ಮುಖಂಡರ ಜೊತೆಗೂಡಿ ಪರಸ್ಪರ ಸಹಕಾರದೊಂದಿಗೆ ಎಲ್ಲರೂ ಸೇರಿ ಒಗ್ಗೂಡಿ ಸರ್ಕಾರದ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿ ಮಾಡುತ್ತೇವೆ ಎಂದು ಕರ್ನಾಟಕ ವಿಧಾನಸಭೆಯ ಸಂಪುಟ ದರ್ಜೆಯ ಸಚಿವರಾದ ಬಸವರಾಜ ರಾಯರೆಡ್ಡಿ ಅವರು ಹೇಳಿದರು.



ಕೊಪ್ಪಳ ನಿರೀಕ್ಷಣಾ ಮಂದಿರದಲ್ಲಿ ಆಗಸ್ಟ್ 6ರಂದು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಜಿಲ್ಲೆಯ ಜನರು ನಮ್ಮ ಮೇಲೆ ಬಹಳಷ್ಟು ನಿರೀಕ್ಷೆ ಇಟ್ಟಿದ್ದಾರೆ. ಅದನ್ನು ಅರಿತು ತಾವು ಎಲ್ಲರೊಡಗೂಡಿ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸುವುದಾಗಿ ಸಚಿವರು ತಿಳಿಸಿದರು.

ಹೊಸದಾಗಿ ಸಂಪುಟಕ್ಕೆ ಸೇರ್ಪಡೆ ಯಾದ ಸಚಿವರಿಗೆ ಈಗಾಗಲೆ ವಿಧಾನಸೌಧ ಮತ್ತು ವಿಕಾಸಸೌಧಗಳಲ್ಲಿ ಕೊಠಡಿಗಳನ್ನು ಹಂಚಿಕೆ ಮಾಡ ಲಾಗಿದೆ. ನಾನು ಸೇರಿದಂತೆ ಎಲ್ಲ ಸಚಿವರು ಸೋಮವಾರದೊಳಗೆ ಕೊಠಡಿಗಳಿಗೆ ಹಾಜರಾಗುತ್ತೇವೆ. ಬರುವ ಸೋಮವಾರದಿಂದಲೇ ಸರ್ಕಾರವು ಪೂರ್ಣಪ್ರಮಾಣದ ಸಚಿವ ಸಂಪುಟದ ಮೂಲಕ ಮತ್ತಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲಿದೆ ಎಂದು ತಿಳಿಸಿದರು.

ಎಲ್ಲರಿಗೂ ಅಭಿನಂದನೆ

ಪಕ್ಷದ ಹಿರಿಯ ಮುಖಂಡರಾದ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಪಕ್ಷದ ಎಲ್ಲ ವರಿಷ್ಠರಿಗೆ, ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಹಾಗೂ ಮಾಜಿ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರ ಸಹಕಾರದಿಂದ ತಾವು ಸಂಪುಟ ದರ್ಜೆಯ ಸಚಿವರಾಗಲು ಸಾಧ್ಯವಾಗಿದ್ದು, ಎಲ್ಲರಿಗೂ ಹೃದಯ ಪೂರ್ವಕ ಅಭಿನಂದನೆಗಳನ್ನು ತಿಳಿಸುವೆ ಎಂದರು.

ಆಗಸ್ಟ್ 7ರಿಂದ ಗದಗ ಪ್ರವಾಸ : ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರು ನಡೆಸಿದ ಸಚಿವ ಸಂಪುಟ ಸಭೆಯಲ್ಲಿ ನಾನು ಮೊದಲ ಬಾರಿಗೆ ಭಾಗಿಯಾಗಿದ್ದೇನೆ. ಮುಖ್ಯಮಂತ್ರಿಗಳ ನಿರ್ದೇಶನದಂತೆ ಎಲ್ಲ ಸಚಿವರ ಬರ ವೀಕ್ಷಣೆಗಾಗಿ ಆಯಾ ಜಿಲ್ಲೆಗಳಿಗೆ ತೆರಳಿದ್ದಾರೆ. ತಮಗೆ ಸದ್ಯ ಗದಗ ಜಿಲ್ಲಾ ಉಸ್ತುವಾರಿ ವಹಿಸಿದ್ದು, ಆಗಸ್ಟ್ 7ರಿಂದ ಮೂರು ದಿನಗಳ ಕಾಲ ಗದಗ ಜಿಲ್ಲೆಯಲ್ಲಿ ಬೆಳೆಹಾನಿ ಬರ ಪರಿವೀಕ್ಷನೆ ನಡೆಸುವುದಾಗಿ ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಹಿರಿಯ ಮುಖಂಡರಾದ ಅಮರೇಗೌಡ ಪಾಟೀಲ ಬಯ್ಯಾಪುರ ಹಾಗೂ ಇನ್ನೀತರ ಮುಖಂಡರು ಇದ್ದರು.

ಜಗತ್ತಿನ ಜ್ಞಾನದ ಬೆಳಕು ಡಾ.ಬಿ.ಆರ್.ಅಂಬೇಡ್ಕರ್- ಪ್ರೊ. ಉಡಿಕೇರಿ

ಕಲಬುರಗಿ ,

ಡಾ.ಬಿ.ಆರ್.ಅಂಬೇಡ್ಕರ್ ಅವರು ಜಗತ್ತಿನ ಜ್ಞಾನದ ಬೆಳಕಾಗಿದ್ದು, ಅವರ ವಿಚಾರಧಾರೆ ಮತ್ತು ಜ್ಞಾನದಿಂದ ಸಮಾಜದ ಅನೇಕ ತಲೆಮಾರುಗಳು ಪ್ರೇರಣೆ ಪಡೆದಿವೆ. ಅವರ ಕರ್ನಾಟಕದೊಂದಿಗೆ ಹೊಂದಿದ್ದ ಐತಿಹಾಸಿಕ ನಂಟನ್ನು ಅರಿಯಲು ''ಕರ್ನಾಟಕದಲ್ಲಿ ಡಾ. ಬಿ.ಆರ್. ಅಂಬೇಡ್ಕರರ ಹೆಜ್ಜೆಗಳು'' ವಿಶೇಷ ಉಪನ್ಯಾಸ ಮಹತ್ವದ ವೇದಿಕೆಯಾಗಿದೆ ಎಂದು ಗುಲ್ಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ್ ಎಸ್. ಉಡಿಕೇರಿ ಹೇಳಿದರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ಪಾಲಿ ಮತ್ತು ಬೌದ್ಧ ಅಧ್ಯಯನ ಸಂಸ್ಥೆ ಹಾಗೂ ಕನ್ನಡ ಅಧ್ಯಯನ ಸಂಸ್ಥೆಯ ವತಿಯಿಂದ ಹರಿಹರ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ''ಕರ್ನಾಟಕದಲ್ಲಿ ಡಾ. ಬಿ.ಆರ್. ಅಂಬೇಡ್ಕರರ ಹೆಜ್ಜೆಗಳು'' ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವಜ್ಞಾನಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜೀವನ, ಚಿಂತನೆ ಮತ್ತು ಕರ್ನಾಟಕದೊಂದಿಗಿನ ಐತಿಹಾಸಿಕ



ಸಂಬಂಧವನ್ನು ಪರಿಚಯಿಸುವ ಕಾರ್ಯಕ್ರಮ ಆಯೋಜಿಸಿರುವ ಪಾಲಿ ಮತ್ತು ಬೌದ್ಧ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ. ಎಚ್.ಟಿ. ಪೋತೆ ಅವರ ಕಾರ್ಯವನ್ನು ಅವರು ಶ್ಲಾಘಿಸಿದರು.

ವಿಶೇಷ ಉಪನ್ಯಾಸ ನೀಡಿದ ಸಹಕಾರ ಇಲಾಖೆಯ ನಿವೃತ್ತ ಉಪನಿರ್ದೇಶಕ ಹಾಗೂ ವಿಜಯಪುರದ ಹಲಸಂಗಿ ಮಧುರಚೆನ್ನ ಗೆಳೆಯರ ಬಳಗದ ಬಿ.ಆರ್. ಬನಸೋಡೆ ಅವರು, 1936ರ ಸುಮಾರಿಗೆ ವಿಜಯಪುರಕ್ಕೆ ಆಗಮಿಸಿದ್ದ ಡಾ. ಅಂಬೇಡ್ಕರ್ ಅವರನ್ನು ತಮ್ಮ ತಾತ ಶಿವಪ್ಪ ಕಾಂಬಳೆ ಅವರು ನದಿ ದಾಟುವ ವೇಳೆ ಹೆಗಲ ಮೇಲೆ ಹೊತ್ತುಕೊಂಡು ಹೋಗಿದ್ದ ಐತಿಹಾಸಿಕ ಘಟನೆಯನ್ನು ಸ್ಮರಿಸಿದರು. ಅಂಬೇಡ್ಕರ್ ಅವರ ಕರ್ನಾಟಕ ಪ್ರವಾಸದ ಕುರಿತು ಅಧ್ಯಯನ ನಡೆಸಿ ಪುಸ್ತಕ ಪ್ರಕಟಿಸಿದ್ದು, ಸಂಗ್ರಹಿಸಿದ ದಾಖಲೆಗಳನ್ನು ಜಿಲ್ಲಾಡಳಿತಕ್ಕೂ ಸಲ್ಲಿಸಿರುವುದಾಗಿ ತಿಳಿಸಿದರು.

ಸಿಂಡಿಕೇಟ್ ಸದಸ್ಯ ಎಸ್.ಪಿ. ಸುಳ್ಳದ್ ಮಾತನಾಡಿ, ಪ್ರೊ. ಎಚ್.ಟಿ. ಪೋತೆ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಶಿಬಿರಗಳು, ವಿಚಾರ ಸಂಕಿರಣಗಳು ಹಾಗೂ ವಿಶೇಷ ಉಪನ್ಯಾಸಗಳು ವಿದ್ಯಾರ್ಥಿಗಳಲ್ಲಿ ಶಿಕ್ಷಣ, ಸಾಹಿತ್ಯ ಮತ್ತು ವೈಚಾರಿಕ ಅರಿವು ಮೂಡಿಸುತ್ತಿವೆ ಎಂದು ಹೇಳಿದರು.

ಪಾಲಿ ಮತ್ತು ಬೌದ್ಧ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ. ಎಚ್.ಟಿ. ಪೋತೆ ಮಾತನಾಡಿ, ಡಾ. ಅಂಬೇಡ್ಕರ್ ಅವರು ಬೆಳಗಾವಿ, ಚಿಕ್ಕೋಡಿ, ನಿಪ್ಪಾಣಿ ಸೇರಿದಂತೆ ಕರ್ನಾಟಕದ ಹಲವು ಪ್ರದೇಶಗಳಿಗೆ ಭೇಟಿ ನೀಡಿ ಸಾಮಾಜಿಕ ಜಾಗೃತಿ ಮತ್ತು ಸಮಾನತೆಯ ಸಂದೇಶ ಸಾರಿದ್ದಾರೆ ಎಂದು ಹೇಳಿದರು.

ನಿಪ್ಪಾಣಿಯಲ್ಲಿ ಚನ್ನಬಸಪ್ಪ ಕರಾಳೆ ಅವರ ಕುದುರೆಯ ಮೇಲೆ ಅಂಬೇಡ್ಕರ್ ಕುಳಿತಿದ್ದ ಪ್ರಸಿದ್ಧ ಛಾಯಾಚಿತ್ರದ ಹಿನ್ನೆಲೆ ಹಾಗೂ ಮಹಮ್ಮದ್ ಪಟೇಲರ ಮನೆಯಲ್ಲಿ ಆತಿಥ್ಯ ಸ್ವೀಕರಿಸಿದ ಸಂದರ್ಭದಲ್ಲಿ ಅಲ್ಲಿನ ಬಾಲಕಿಗೆ ''ಮುನ್ನಿ'' ಎಂದು ಹೆಸರಿಟ್ಟ ಘಟನೆಯನ್ನು ಅವರು ವಿವರಿಸಿದರು.

ಅಂಬೇಡ್ಕರ್ ಅವರ ಕರ್ನಾಟಕ ಪ್ರವಾಸದ ಇತಿಹಾಸವನ್ನು ಯುವಜನತೆ ಆಳವಾಗಿ ಅಧ್ಯಯನ ಮಾಡಬೇಕಿದ್ದು, ಶರಣ-ಸಂತರ ಚಿಂತನೆಗಳೊಂದಿಗೆ ಅವರ ವಿಚಾರಗಳನ್ನು ಅರ್ಥೈಸಿಕೊಂಡಾಗ ಮಾತ್ರ ಸಮಾಜಮುಖಿ ಭವಿಷ್ಯ ನಿರ್ಮಾಣ ಸಾಧ್ಯ ಎಂದು ಪ್ರೊ. ಪೋತೆ ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ರಾಷ್ಟ್ರಪತಿ ಪ್ರಶಸ್ತಿ ಪುರಸ್ಕೃತ ಡಾ. ರೆಹಮಾನ್ ಪಟೇಲ್ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾವಿಷಯಕ ಪರಿಷತ್ ಸದಸ್ಯ ಡಾ. ದಶರಥ ನಾಯಕ, ಸಂದರ್ಶಕ ಪ್ರಾಧ್ಯಾಪಕ ಡಾ. ಸೂರ್ಯಕಾಂತ ಸುಜ್ಯಾತ, ಅತಿಥಿ ಉಪನ್ಯಾಸಕರು, ಸಂಶೋಧನಾ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು. ಸಂಗೀತ ವಿಭಾಗದ ಉಪನ್ಯಾಸಕ ಸಿದ್ಧಾರ್ಥ ಚಿಮ್ಮಾಇದ್ಲಾಯಿ ಬುದ್ಧ ವಂದನೆ ಗೀತೆ ಹಾಡಿದರು. ಡಾ. ಶಂಭುನಾಥ ನಡಗೇರಿ ಸ್ವಾಗತಿಸಿದರು. ಡಾ. ಸಂದೀಪ ಹೋಳ್ಕರ್ ವಂದಿಸಿದರು. ಡಾ. ಕಿರಣ್ ವಲ್ಲೇಪುರೆ ಕಾರ್ಯಕ್ರಮ ನಿರೂಪಿಸಿದರು.

ರೈತರ ಹಿತರಕ್ಷಣೆಗೆ ಕಟ್ಟುನಿಟ್ಟಿನ ಕ್ರಮ: ಬೆಳೆ ವಿಮೆ ನೋಂದಣಿ ಹೆಚ್ಚಳಕ್ಕೆ ಹಾಗೂ ರಸಗೊಬ್ಬರ ಶೇಖರಣೆಗೆ ಸೂಚನೆ

ಬರ ಪರಿಸ್ಥಿತಿ ನಿರ್ವಹಣೆ: ಅಧಿಕಾರಿಗಳು ಕಡ್ಡಾಯವಾಗಿ ಕ್ಷೇತ್ರ ಭೇಟಿ ನೀಡಲು ಸಚಿವ ಬಿ. ನಾಗೇಂದ್ರ ಸೂಚನೆ

ಬಳ್ಳಾರಿ,ಆ.07

ಜಿಲ್ಲೆಯಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಮತ್ತು ಸಂಕಷ್ಟದಲ್ಲಿರುವ ರೈತರ ನೆರವಿಗೆ ಧಾವಿಸಲು ಸರ್ಕಾರದ ಆದೇಶದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಕ್ಷೇತ್ರ ಭೇಟಿ ನಡೆಸಬೇಕು ಎಂದು ಕರ್ನಾಟಕ ಸರ್ಕಾರದ ಸಂಪುಟ ದರ್ಜೆ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಅತಿವೃಷ್ಠಿ ಮತ್ತು ಬರ ಪರಿಸ್ಥಿತಿ ನಿರ್ವಹಣೆಯ ಮೇಲುಸ್ತುವಾರಿ ಸಚಿವ ಬಿ. ನಾಗೇಂದ್ರ ಅವರು ಹೇಳಿದರು.



ಗುರುವಾರದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲೆಯ ಬರಪರಿಸ್ಥಿತಿ ಕುರಿತು ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳ ಕಟ್ಟುನಿಟ್ಟಿನ ನಿರ್ದೇಶನದಂತೆ ಯಾವುದೇ ಅಧಿಕಾರಿಗಳು ಕೇಂದ್ರಸ್ಥಾನ ಬಿಡದೆ, ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ವೀಕ್ಷಿಸಬೇಕು. 'ನಾವು ನಿಮ್ಮೊಂದಿಗಿದ್ದೇವೆ' ಎಂಬ ಧೈರ್ಯವನ್ನು ರೈತರಲ್ಲಿ ತುಂಬುವುದು ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದರು.

ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸುವಂತೆ ಜಾಗೃತಿ ಮೂಡಿಸಲು ವಿಶೇಷ ಡ್ರೈವ್ ಮಾಡಬೇಕು ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಮಧ್ಯಪ್ರವೇಶಿಸಿ, ಅಧಿಕಾರಿಗಳ ಜಾಗೃತಿಯ ಫಲವಾಗಿ ಪ್ರಸ್ತುತ ನೋಂದಾಯಿತ ರೈತರ ಸಂಖ್ಯೆ 37,000ಕ್ಕೆ ಏರಿಕೆಯಾಗಿದೆ. ಆಗಸ್ಟ್ 14ರವರೆಗೆ ಸಮಯಾವಕಾಶವಿದ್ದು, ಕನಿಷ್ಠ 60,000ದಿಂದ 75,000 ರೈತರನ್ನು ವಿಮಾ ವ್ಯಾಪ್ತಿಗೆ ತರುವ ಗುರಿ ಹೊಂದಲಾಗಿದೆ ಎಂದು ಸಚಿವರ ಗಮನಕ್ಕೆ ತಂದರು.

ಜಿಲ್ಲೆಯಲ್ಲಿ ಒಟ್ಟು 57,000 ಹೆಕ್ಟೇರ್ ಪ್ರದೇಶದಲ್ಲಿ ಒಣಬೇಸಾಯ (ಖುಷ್ಕಿ) ಮತ್ತು ಸಂರಕ್ಷಿತ ನೀರಾವರಿ ಬೆಳೆಗಳು ಹಾನಿಗೊಳಗಾಗಿವೆ ಎಂದು ಕಂದಾಯ ಮತ್ತು ಕೃಷಿ ಇಲಾಖೆಯ ಜಂಟಿ ಸಮೀಕ್ಷೆಯಿಂದ ಅಂದಾಜಿಸಲಾಗಿದೆ. ಪ್ರಸ್ತುತ ಭತ್ತದ ಬೆಳೆಗೆ ವಿಮೆ ಮಾಡಿಸಲು ಅವಕಾಶವಿದ್ದು, ರಾಗಿ ಮತ್ತು ಜೋಳದಂತಹ ಬೆಳೆಗಳಿಗೆ ಗಡುವು ಮುಕ್ತಾಯಗೊಂಡಿದೆ. ನಷ್ಟಕ್ಕೊಳಗಾದ ರೈತರಿಗೆ ಸೂಕ್ತ ಪರಿಹಾರ ಸಿಗುವಂತೆ ಪಟ್ಟಿ ಸಿದ್ಧಪಡಿಸಲು ನಿರ್ದೇಶಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಕೊರತೆಯಿಲ್ಲ. ಪ್ರಸ್ತುತ 69,877 ಮೆಟ್ರಿಕ್ ಟನ್ ಗೊಬ್ಬರ ದಾಸ್ತಾನಿದ್ದು, ಯೂರಿಯಾ ಮತ್ತು ಡಿಎಪಿ ಗೊಬ್ಬರಗಳಿಗೆ ಹೆಚ್ಚಿನ ಬೇಡಿಕೆಯಿದೆ. ಕೃತಕ ಅಭಾವ ಸೃಷ್ಟಿಯಾಗದಂತೆ ತಡೆಯಲು 'ಫ್ರೂಟ್ಸ್' ತಂತ್ರಾಂಶದ ಫಾರ್ಮರ್ ಐಡಿ ಆಧರಿಸಿ ಗೊಬ್ಬರ ವಿತರಿಸಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮ್ ಸುಂದರ್ ಅವರು ಹೇಳಿದರು.

ಸಚಿವ ಬಿ.ನಾಗೇಂದ್ರ ಅವರು ಮಾತನಾಡಿ, ರಸಗೊಬ್ಬರ ಖರೀದಿಸುವಾಗ ರೈತರಿಗೆ ಅನಗತ್ಯವಾಗಿ ಇತರ ಸೂಕ್ಷ್ಮ ಪೋಷಕಾಂಶಗಳನ್ನು ಬಲವಂತವಾಗಿ ಜೋಡಿಸಿ ಮಾರಾಟ ಮಾಡುವ ಸಾಗಣೆದಾರರು ಮತ್ತು ಡೀಲರ್‌ಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ನಿಯಮ ಉಲ್ಲಂಘಿಸುವ ಮಾರಾಟಗಾರರ ವಿರುದ್ಧ ರಸಗೊಬ್ಬರ ನಿಯಂತ್ರಣ ಕಾಯ್ದೆ ಹಾಗೂ ಅಗತ್ಯ ವಸ್ತುಗಳ ಕಾಯ್ದೆಯಡಿ ಪ್ರಕರಣ ದಾಖಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ನೀರಾವರಿ ನೀರು ಕೊರತೆ ಎದುರಾಗುತ್ತಿರುವ ಹಿನ್ನೆಲೆಯಲ್ಲಿ, ಸಾಂಪ್ರದಾಯಿಕ ನೀರು ಭರಿತ ಭತ್ತದ ಬೇಸಾಯದ ಬದಲು ಕೂರಿಗೆ ಪದ್ಧತಿ ಮೂಲಕ ಭತ್ತ ಬೆಳೆಯಲು ರೈತರನ್ನು ಪ್ರೋತ್ಸಾಹಿಸುವ ಕೆಲಸ ಮಾಡಬೇಕು. ಸಾಂಪ್ರದಾಯಿಕ ಪದ್ಧತಿಗೆ ಹೋಲಿಸಿದರೆ ಕೂರಿಗೆ ಪದ್ಧತಿಯಲ್ಲಿ ಶೇ. 60 ರಷ್ಟು ನೀರು ಉಳಿತಾಯವಾಗಲಿದ್ದು, ಕೇವಲ ಶೇ. 40 ರಷ್ಟು ನೀರಿನ ಅಗತ್ಯವಿರುತ್ತದೆ. ಈ ಪದ್ಧತಿಯಲ್ಲಿ ಪ್ರತಿ ಹೆಕ್ಟೇರ್‌ಗೆ 62.5 ಕೆಜಿ ಬೀಜ ಬೇಕಿದ್ದರೆ, ಕೂರಿಗೆ ಪದ್ಧತಿಯಲ್ಲಿ ಕೇವಲ 12.5 ಕೆಜಿ ಬೀಜ ಸಾಕು. ಇದರಿಂದ ರೈತರ ಉತ್ಪಾದನಾ ವೆಚ್ಚ ಗಣನೀಯವಾಗಿ ಕಡಿಮೆಯಾಗುತ್ತದೆ. ಸಾಮಾನ್ಯ ಪದ್ಧತಿಯಲ್ಲಿ ಪ್ರತಿ ಹೆಕ್ಟೇರ್‌ಗೆ 60 ರಿಂದ 70 ಕ್ವಿಂಟಲ್ ಇಳುವರಿ ಬಂದರೆ, ಕೂರಿಗೆ ಪದ್ಧತಿಯಲ್ಲಿ 40 ರಿಂದ 45 ಕ್ವಿಂಟಲ್ (ಕೆಲವು ಕಡೆ 60 ಕ್ವಿಂಟಲ್ ವರೆಗೂ) ಇಳುವರಿ ಪಡೆಯಬಹುದಾಗಿದೆ ಎಂದು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕ ಕೆ.ಸೋಮಸುಂದರ್ ಅವರು ಮಾತನಾಡಿ, ಜಿಲ್ಲೆಯ ಅಚ್ಚುಕಟ್ಟು ಪ್ರದೇಶದಲ್ಲಿ ಒಟ್ಟು 1,18,000 ಹೆಕ್ಟೇರ್ ನೀರಾವರಿ ಭೂಮಿ ಇದ್ದು, ನಾನ್-ಅಚ್ಚುಕಟ್ಟು ಪ್ರದೇಶದಲ್ಲಿ ಸುಮಾರು 41,000 ಹೆಕ್ಟೇರ್ ಒಣಭೂಮಿ ಇದೆ. ಈಗಾಗಲೇ ಜಿಲ್ಲೆಯಾದ್ಯಂತ ಸುಮಾರು 1,500 ಹೆಕ್ಟೇರ್ ಪ್ರದೇಶದಲ್ಲಿ ಕೂರಿಗೆ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗಿದೆ. ಸಿರುಗುಪ್ಪ ತಾಲೂಕಿನಲ್ಲಿ ಸುಮಾರು 3,000 ಹೆಕ್ಟೇರ್ ಹಾಗೂ ಬಳ್ಳಾರಿ ತಾಲೂಕಿನ ಕೃಷ್ಣಾನಗರ ಕ್ಯಾಂಪ್ ಸುತ್ತಮುತ್ತಲಿನ ಭಾಗಗಳಲ್ಲಿ ರೈತರು ಈ ಪದ್ಧತಿಯನ್ನು ಯಶಸ್ವಿಯಾಗಿ ಅಳವಡಿಸಿಕೊಂಡಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯ ಎಲ್ಲಾ 13 ಹೋಬಳಿಗಳಲ್ಲಿ ಜಾಗೃತಿ ಕಾರ್ಯಕ್ರಮಗಳ ಮೂಲಕ ಕೂರಿಗೆ ಪದ್ಧತಿಯ ಬಗ್ಗೆ ಜಾಗೃತಿ ಮೂಡಿಸಲಾಗಿದೆ. ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ತಾಲೂಕು ಮಟ್ಟದಲ್ಲಿ ರೈತ ಮುಖಂಡರನ್ನು ಕರೆದು ಸಭೆ ನಡೆಸಲಾಗಿದೆ. ನೀರಿನ ಅಭಾವವಿರುವ ಪ್ರಸ್ತುತ ಸನ್ನಿವೇಶದಲ್ಲಿ ಕುಡಿಯುವ ನೀರು ಮತ್ತು ಕೃಷಿ ನಡುವೆ ಸಮತೋಲನ ಕಾಯ್ದುಕೊಳ್ಳಲು ಈ ಪದ್ಧತಿ ಅತ್ಯಂತ ಸೂಕ್ತವಾಗಿದ್ದು, ಹೆಚ್ಚಿನ ರೈತರು ಇದನ್ನು ಅಳವಡಿಸಿಕೊಳ್ಳುವಂತೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವವಾಗದಂತೆ ನೋಡಿಕೊಳ್ಳಬೇಕು. ಬಳ್ಳಾರಿ ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಕುಡಿಯುವ ನೀರಿನ ಅಭಾವ ತೀವ್ರಗೊಳ್ಳುತ್ತಿದ್ದು, ಜಿಲ್ಲೆಯ ಕೆರೆಗಳಲ್ಲಿ ನೀರಿನ ಮಟ್ಟ ಆತಂಕಕಾರಿ ರೀತಿಯಲ್ಲಿ ಕುಸಿದಿದೆ. ಜಿಲ್ಲಾಡಳಿತ ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಸೂಕ್ತ ಕಾರ್ಯಯೋಜನೆ ರೂಪಿಸಿ ನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಸಂಡೂರು ಭಾಗದ ಮೆಟ್ರಿಕಿ ಮತ್ತು ವಿಟ್ಲಾಪುರ ಭಾಗಗಳಲ್ಲಿ ಜಾನುವಾರುಗಳ ಮೇವಿಗೆ ತೀವ್ರ ಅಭಾವ ಎದುರಾಗಿದೆ. ಈ ಪೈಕಿ ವಿಟ್ಲಾಪುರದಲ್ಲಿ ಮೇವಿಗೆ ಹೆಚ್ಚಿನ ಬೇಡಿಕೆಯಿದೆ. ನೀರಾವರಿ ಸೌಲಭ್ಯವಿರುವ ರೈತ ಕುಟುಂಬಕ್ಕೆ ಕಿಟ್‌ಗಳನ್ನು ವಿತರಣೆ ಮಾಡಬೇಕು. ಬರ ಘೋಷಣೆಯಾಗುವವರೆಗೆ ಕಾಯದೆ, ಸದ್ಯದ ಅಭಾವ ಪೂರೈಸಲು ಜಿಲ್ಲೆಯಾದ್ಯಂತ ಪ್ರತಿಯೊಂದು ಮನೆಗೆ ತೆರಳಿ ಜಾನುವಾರುಗಳ ಸಮೀಕ್ಷೆ ನಡೆಸಬೇಕು ಎಂದು ಪಶು ಸಂಗೋಪನಾ ಇಲಾಖಾಧಿಕಾರಿಗಳಿಗೆ ತಿಳಿಸಿದರು.

★ಉದ್ಯೋಗ ಖಾತ್ರಿ ಯೋಜನೆ ಸಮರ್ಪಕ ಅನುಷ್ಠಾನ:★

ಜಿಪಂ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಜುಲೈ 1ರಿಂದ ಜಾರಿಗೆ ಬಂದಿರುವ ವಿ ಬಿ ಜಿ ರಾಮ್ ಜಿ ಹೊಸ ಮಾರ್ಗದರ್ಶನದಂತೆ ಉದ್ಯೋಗ ದಿನಗಳನ್ನು 100ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ. ಕೂಲಿ ಪ್ರಮಾಣವನ್ನು ರೂ.370 ರಿಂದ ರೂ.382 ಕ್ಕೆ ಏರಿಸಲಾಗಿದೆ. ಕೂಲಿ ಪಾವತಿಯಲ್ಲಿ ಶೇ. 40ರಷ್ಟು ಹಣವನ್ನು ರಾಜ್ಯ ಸರ್ಕಾರವೇ ಭರಿಸಬೇಕಾಗಿದ್ದು, ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ಪ್ರಸ್ತುತ ರಾಜ್ಯದಲ್ಲಿ ಬಳ್ಳಾರಿ ಜಿಲ್ಲೆಯು ಉದ್ಯೋಗ ಖಾತ್ರಿ ಅನುಷ್ಠಾನದಲ್ಲಿ 2ನೇ ಸ್ಥಾನದಲ್ಲಿದೆ. ಇದರಲ್ಲಿ ಕಾಲುವೆ ಸ್ವಚ್ಛತೆ ಜೊತೆಗೆ ದನದ ಕೊಟ್ಟಿಗೆ, ಕೋಳಿ ಶೆಡ್, ಕೃಷಿ ಹೊಂಡ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಪ್ರತಿ ತಾಲೂಕಿನಲ್ಲಿ ಲಭ್ಯವಿರುವ 10 ಎಕರೆ ಸರ್ಕಾರಿ/ಗೋಮಾಳ ಜಮೀನಿನಲ್ಲಿ ದೊಡ್ಡ ಕೆರೆ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಯಾವುದೇ ಕಾರಣಕ್ಕೂ ತಪ್ಪು ಅಥವಾ ಗೊಂದಲಕಾರಿ ಮಾಹಿತಿ ನೀಡಬಾರದು. ಯಾವುದೇ ನ್ಯೂನತೆಗಳಿದ್ದರೂ ನೇರವಾಗಿ ತಿಳಿಸಿದರೆ ಅದನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಸ್ಪಷ್ಟಪಡಿಸಿದರು.

ಜಿಲ್ಲೆಯ ಅಭಿವೃದ್ಧಿಗೆ ಮತ್ತು ನೂತನ ಆಲೋಚನೆಗಳನ್ನು ಅನುಷ್ಠಾನಗೊಳಿಸಲು ಅಧಿಕಾರಿಗಳಿಗೆ ಆಡಳಿತಾತ್ಮಕವಾಗಿ ಸಂಪೂರ್ಣ ಮುಕ್ತ ಸ್ವಾತಂತ್ರ್ಯ ನೀಡಲಾಗುವುದು. ಸರ್ಕಾರದ ಹಣ ದುರುಪಯೋಗವಾಗದಂತೆ ತಡೆದು, ಪರಿಣಾಮಕಾರಿಯಾಗಿ ಕೆಲಸ ಮಾಡಲು ಕರೆ ನೀಡಿದರು.

ಸಭೆಯಲ್ಲಿ ಡಾ.ಬಾಬು ಜಗಜೀವನರಾಂ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮೇಯರ್ ಪಿ.ಗಾದೆಪ್ಪ, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೊರೇಷನ್ ಲಿಮಿಟೆಡ್ ನ ಉಪಾಧ್ಯಕ್ಷ ಹೆಚ್.ಲಕ್ಷ್ಮಣ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್, ಬಳ್ಳಾರಿ ವಲಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್ ಬಸವರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಎಲ್ಲಾ ತಾಲೂಕು ತಹಶೀಲ್ದಾರರು ಹಾಗೂ ಇತರರು ಉಪಸ್ಥಿತರಿದ್ದರು.

ಜಂತುನಿವಾರಕ ಮಾತ್ರೆಯಿಂದ ಯಾವುದೇ ಮಗು ವಂಚಿತವಾಗದಂತೆ ನೋಡಿಕೊಳ್ಳಿ: ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ

ಕೊಪ್ಪಳ ಆ.07

ವಿವಿಧ ಇಲಾಖೆಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸಿ ಯಾವುದೇ ಮಗು ಜಂತುನಿವಾರಕ ಮಾತ್ರೆಯಿಂದ ವಂಚಿತವಾಗದಂತೆ ನೋಡಿಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 10ರಂದು ನಡೆಯಲಿರುವ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಬುಧವಾರ (ಆ. 5ರಂದು) ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಜಂತುರಹಿತ ಮಗು ದೇಶದ ಸಂಪತ್ತು, ಮಕ್ಕಳ ಆರೋಗ್ಯ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಈ ಹಿನ್ನೆಲೆಯಲ್ಲಿ ಆಗಸ್ಟ್ 10ರಂದು ನಡೆಯಲಿರುವ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮದ ಕುರಿತು ವ್ಯಾಪಕ ಜನಜಾಗೃತಿ ಮೂಡಿಸಿ, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕರೆ ನೀಡಿದರು.

ಜಿಲ್ಲಾ ಆರ್.ಸಿ.ಎಚ್. ಅಧಿಕಾರಿಗಳಾದ ಡಾ. ಪ್ರಕಾಶ್ ವಿ. ಅವರು ಕಾರ್ಯಕ್ರಮದ ಕುರಿತು ಮಾಹಿತಿ ನೀಡಿ, ನಿವಾರಣಾ ಕಾರ್ಯಕ್ರಮದ ಜಿಲ್ಲೆಯ 1 ರಿಂದ 19 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಜಂತುನಿವಾರಕ ಅಲ್ಬೆಂಡಾಜೋಲ್ ಮಾತ್ರೆಯನ್ನು ವಿತರಿಸಲಾಗುವುದು. ಅಂಗನವಾಡಿ ಮಕ್ಕಳಿಗೆ ಅಂಗನವಾಡಿ ಕೇಂದ್ರಗಳಲ್ಲಿ ಹಾಗೂ ಸರ್ಕಾರಿ ಮತ್ತು ಖಾಸಗಿ ಶಾಲೆ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಆಯಾ ಶಿಕ್ಷಣ ಸಂಸ್ಥೆಗಳ ಮೂಲಕ ಮಾತ್ರೆ ನೀಡಲಾಗುವುದು. ಆಗಸ್ಟ್ 10ರ ರಾಷ್ಟ್ರೀಯ ಜಂತುಹುಳು ಕಾರ್ಯಕ್ರಮ ದಿನದಂದು ಗೈರು ಹಾಜರಾಗುವ ಮಕ್ಕಳಿಗೆ ಆಗಸ್ಟ್ 17ರಂದು ಮರು ಅವಕಾಶ ಕಲ್ಪಿಸಲಾಗಿದೆ ಎಂದರು.

ಶಾಲೆಯಿಂದ ಹೊರಗುಳಿದ ಮಕ್ಕಳಿಗೂ ಅಂಗನವಾಡಿ ಕೇಂದ್ರಗಳಲ್ಲಿ ಮಾತ್ರೆ ನೀಡಲಾಗುವುದು. 1 ರಿಂದ 2 ವರ್ಷದ ಮಕ್ಕಳಿಗೆ ಅರ್ಧ ಮಾತ್ರೆ (200 ಮಿ.ಗ್ರಾಂ) ಹಾಗೂ 2 ವರ್ಷ ಮೇಲ್ಪಟ್ಟ ಮಕ್ಕಳಿಗೆ ಪೂರ್ಣ ಮಾತ್ರೆ (400 ಮಿ.ಗ್ರಾಂ) ನೀಡಲಾಗುತ್ತದೆ. ಸಣ್ಣ ಮಕ್ಕಳಿಗೆ ಮಾತ್ರೆಯನ್ನು ನೀರಿನಲ್ಲಿ ಕರಗಿಸಿ ಕುಡಿಸುವಂತೆ ಸೂಚಿಸಲಾಗಿದೆ. ಮಕ್ಕಳಲ್ಲಿ ಜಂತುಬಾಧೆ, ಅಪೌಷ್ಟಿಕತೆ ಹಾಗೂ ರಕ್ತಹೀನತೆ ತಡೆಗಟ್ಟಿ, ಮಾನಸಿಕ ಹಾಗೂ ದೈಹಿಕ ಬೆಳವಣಿಗೆಗೆ ಸಹಕಾರಿಯಾಗುವ ಉದ್ದೇಶದಿಂದ ಪ್ರತಿ ಆರು ತಿಂಗಳಿಗೊಮ್ಮೆ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ ಎಂದು ಅವರು ವಿವರಿಸಿದರು.

ಜಂತುಹುಳು ನಿವಾರಣಾ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಆರೋಗ್ಯ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಶಾಲಾ ಶಿಕ್ಷಕರಿಗೆ ಆರೋಗ್ಯ ಕೇಂದ್ರಗಳ ಹಂತದಲ್ಲಿ ತರಬೇತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಪೋಸ್ಟರ್ ಬಿಡುಗಡೆ: ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮದ ಪೋಸ್ಟರ್‌ನ್ನು ಇದೇ ಸಂದರ್ಭದಲ್ಲಿ ಬಿಡುಗಡೆಗೊಳಿಸಲಾಯಿತು. ಸಭೆಯಲ್ಲಿ ಜಿಲ್ಲಾ ಕುಟುಂಬ ಕಲ್ಯಾಣಾ ಧಿಕಾರಿಗಳಾದ ಡಾ. ರವೀಂದ್ರನಾಥ್ ಎಂ. ಎಚ್., ಜಿಲ್ಲಾ ಕುಷ್ಠರೋಗ ನಿಯಂತ್ರಣಾ ಧಿಕಾರಿಗಳಾದ ಡಾ. ಪ್ರಕಾಶ್ ಹೆಚ್., ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳಾದ ಡಾ. ಶಶಿಧರ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಾದ ಡಾ. ಕುಮಾರ ಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ ಸೇರಿದಂತೆ ಎಲ್ಲಾ ತಾಲೂಕು ಆರೋಗ್ಯಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ವೈದ್ಯಾಧಿಕಾರಿಗಳು, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳು, ಹಾಗೂ ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

ಅಲ್ಲಾಪುರ್ ಗ್ರಾಮದ ಶಾಲೆಯ ಮುಖ್ಯ ಶಿಕ್ಷಕರ ವರ್ಗಾವಣೆಗೆ ಪೋಷಕರ ಆಗ್ರಹ



ಔರಾದ್,ಆ.06-

ತಾಲೂಕಿನ ಅಲ್ಲಾಪುರ್ ಗ್ರಾಮದ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕರನ್ನು ತಕ್ಷಣ ವರ್ಗಾವಣೆ ಮಾಡಿ, ಅರ್ಹ ಶಿಕ್ಷಕರನ್ನು ನೇಮಕ ಮಾಡಬೇಕು ಎಂದು ಆಗ್ರಹಿಸಿ ವಿದ್ಯಾರ್ಥಿಗಳ ಪೋಷಕರು ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಮನವಿಯಲ್ಲಿ, ಕಳೆದ 10 ವರ್ಷಗಳಿಂದ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರು ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ. ಶಾಲೆಯ ಸಮಯದಲ್ಲಿ ಮೊಬೈಲ್ ಫೋನ್ ವೀಕ್ಷಿಸುತ್ತಾ ಕಾಲ ಕಳೆಯುತ್ತಿದ್ದು, ಮಕ್ಕಳಿಗೆ ಸಮರ್ಪಕವಾಗಿ ಪಾಠ ಬೋಧನೆ ಮಾಡುತ್ತಿಲ್ಲ ಎಂದು ಪೋಷಕರು ದೂರಿದ್ದಾರೆ. ಇದರಿಂದ ವಿದ್ಯಾರ್ಥಿಗಳ ಕಲಿಕೆಗೆ ಧಕ್ಕೆಯಾಗುತ್ತಿದ್ದು, ಶಾಲೆ ಹಾಗೂ ಆವರಣದ ಸ್ವಚ್ಛತೆಯ ಬಗ್ಗೆಯೂ ನಿರ್ಲಕ್ಷ್ಯ ವಹಿಸಲಾಗುತ್ತಿದೆ. ಸಾರ್ವಜನಿಕರೊಂದಿಗೆ ಅನುಚಿತವಾಗಿ ವರ್ತಿಸುವ ಮೂಲಕ ಗೌರವಕ್ಕೆ ಧಕ್ಕೆ ತರುತ್ತಿದ್ದಾರೆ ಎಂಬ ಆರೋಪವನ್ನೂ ಮನವಿಯಲ್ಲಿ ಮಾಡಲಾಗಿದೆ.

ಆದ್ದರಿಂದ ಪ್ರಸ್ತುತ ಮುಖ್ಯ ಶಿಕ್ಷಕರನ್ನು ಬೇರೆಡೆಗೆ ವರ್ಗಾವಣೆ ಮಾಡಿ, ಅವರ ಸ್ಥಾನಕ್ಕೆ ಅರ್ಹ ಇಂಗ್ಲಿಷ್ ಶಿಕ್ಷಕರನ್ನು ಅಥವಾ ಅತಿಥಿ ಶಿಕ್ಷಕರನ್ನು ನೇಮಕ ಮಾಡಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತ ಕಾಪಾಡಬೇಕು ಎಂದು ಪೋಷಕರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಪ್ರಕಾಶ್ ಕಾಂಬಳೆ, ಮಾರುತಿ ಜೂಲಂಡೆ, ರಾಜಕುಮಾರ್ ಮಚಕೂರೆ, ಧೋಂಡಿಬಾ ಪಾಟೀಲ್, ರಾಜಕುಮಾರ್ ಹಾಗೂ ಸಂಜುಕುಮಾರ್ ಮಚಕೂರೆ ಇದ್ದರು.

ಒಂದನೇಯ ಪುಟದಿಂದ

ಬರದಿಂದ ಶೇ.90ರಷ್ಟು ಬೆಳೆ ನಷ್ಟ:ಪರಿಹಾರಕ್ಕಾಗಿ ಸರ್ಕಾರದಿಂದ ಸೂಕ್ತ ನಿರ್ಧಾರ

ಶಾಸಕರು ಅಧಿಕಾರಿಗಳೊಂದಿಗೆ ಪ್ರತಿ ತಾಲೂಕಿಗೆ ತೆರಳಿ ಪರಿಸ್ಥಿತಿ ಅಧ್ಯಯನ ನಡೆಸುತ್ತಿದ್ದಾರೆ ಎಂದರು.

ರೈತರ ಸಾಲ, ವಿಮೆ ಸಮಸ್ಯೆಗೂ ಸ್ಪಂದನೆ

ರೈತರು ಸಾಲ ಮನ್ನಾ ಹಾಗೂ ತುರ್ತು ಪರಿಹಾರಕ್ಕೆ ಒತ್ತಾಯಿಸುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳಲಿದೆ. ರಾಜ್ಯ ಸರ್ಕಾರ ರೈತರ ಪರವಾಗಿದ್ದು, ಕೇಂದ್ರ ಸರ್ಕಾರವೂ ರೈತರ ನೆರವಿಗೆ ಧಾವಿಸಿ ಸೂಕ್ತ ಪರಿಹಾರ ಒದಗಿಸಬೇಕು ಎಂದು ಸಚಿವರು ಹೇಳಿದರು.

ಕಳೆದ ಐದು ವರ್ಷಗಳಿಂದ ರೈತರಿಗೆ ಬೆಳೆ ವಿಮೆ ಕ್ಲೇಮ್‌ಗಳು ಸಮರ್ಪಕವಾಗಿ ದೊರೆಯದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆ. ರೈತರಿಗೆ ಅನುಕೂಲವಾಗುವಂತೆ ವಿಮಾ ವ್ಯವಸ್ಥೆಯನ್ನು ಸರಳೀಕರಿಸುವುದು ಹಾಗೂ ವಿಮಾ ಕಂಪನಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಕರಿಯಪ್ಪ ತಾತನ ದರ್ಶನ

ಬರ ವೀಕ್ಷಣೆಯ ಬಳಿಕ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕಲ್ಮಲಾ ಗ್ರಾಮದ ಶ್ರೀ ಕರಿಯಪ್ಪ ತಾತನವರ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದರು. ಬಳಿಕ ಸ್ಥಳೀಯ ಮುಖಂಡರೊಂದಿಗೆ ಕೆಲಕಾಲ ಚರ್ಚಿಸಿ ಪ್ರಸಾದ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ರಾಯಚೂರು ನಗರ ಶಾಸಕ ಡಾ. ಶಿವರಾಜ ಎಸ್. ಪಾಟೀಲ್, ಗ್ರಾಮೀಣ ಶಾಸಕ ಬಸನಗೌಡ ದದ್ದಲ್, ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ್, ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ, ಸಹಾಯಕ ಆಯುಕ್ತ ಡಾ. ಹಂಪಣ್ಣ ಸಜ್ಜನ್, ತಹಶೀಲ್ದಾರ್ ಸುರೇಶ್ ವರ್ಮಾ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಬರದ ಬಿಸಿಗೆ ಸರ್ಕಾರದ ಚುರುಕು; ರಾಯಚೂರಿನಲ್ಲಿ ಸಚಿವ ಅಜಯ್ ಧರ್ಮಸಿಂಗ್ ಪರಿಶೀಲನೆ

ಸಮಗ್ರ ಮಾಹಿತಿಯನ್ನು ಪಡೆದು, ಬರ ಪರಿಸ್ಥಿತಿ ಎದುರಿಸಲು ಕೈಗೊಳ್ಳಬೇಕಾದ ತುರ್ತು ಕ್ರಮಗಳ ಕುರಿತು ಮಾರ್ಗದರ್ಶನ ನೀಡಿದರು. ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಗ್ರಾಮಾಂತರ ಶಾಸಕ ಬಸವನಗೌಡ ದದ್ದಲ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷು ಗಿರಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಇಂದು ಸಿಂಧನೂರು, ಮಾನ್ವಿ, ರಾಯಚೂರು ಪ್ರವಾಸ: ಸಚಿವ ಡಾ. ಅಜಯ್ ಧರ್ಮಸಿಂಗ್ ಅವರು ಆ.8ರಂದು ಸಿಂಧನೂರು, ಮಾನ್ವಿ ಹಾಗೂ ರಾಯಚೂರು ತಾಲೂಕುಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿಯನ್ನು ಪರಿಶೀಲಿಸಲಿದ್ದಾರೆ. ಬಳಿಕ ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಮಟ್ಟದ ಪರಿಶೀಲನಾ ಸಭೆ ನಡೆಸಲಿದ್ದಾರೆ.

ಜಿಲ್ಲೆಯ ಬರ ಪರಿಸ್ಥಿತಿಯ ವಾಸ್ತವ ಚಿತ್ರಣವನ್ನು ಖುದ್ದು ಪರಿಶೀಲಿಸಿ, ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸಚಿವರ ಎರಡು ದಿನಗಳ ಪ್ರವಾಸ ಮಹತ್ವ ಪಡೆದಿದೆ.

ಮೂರು ಬಾರಿ ಬಿತ್ತನೆ; ಎಕರೆಗೆ ₹25 ಸಾವಿರ ಖರ್ಚು: ಹತ್ತಿ ರೈತರಿಗೆ ಪರಿಹಾರ ನೀಡಿ -ಬಸನಗೌಡ ದದ್ದಲ್

ಏಳು ವರ್ಷಗಳಿಂದ ವಿಮೆ ಕಟ್ಟಿದರೂ ಪರಿಹಾರವಿಲ್ಲ: ರೈತರು ಕಳೆದ ಏಳು ವರ್ಷಗಳಿಂದ ನಿಯಮಿತವಾಗಿ ಬೆಳೆ ವಿಮೆ ಪ್ರೀಮಿಯಂ ಪಾವತಿಸುತ್ತಿದ್ದರೂ, ಅನೇಕ ರೈತರಿಗೆ ಇನ್ನೂ ವಿಮಾ ಪರಿಹಾರ ದೊರೆತಿಲ್ಲ. ಸರ್ಕಾರ ಹಾಗೂ ಸಂಬಂಧಿಸಿದ ವಿಮಾ ಕಂಪನಿಗಳು ರೈತರಿಗೆ ಸಲ್ಲಬೇಕಾದ ಬೆಳೆ ವಿಮೆ ಪರಿಹಾರವನ್ನು ವಿಳಂಬವಿಲ್ಲದೆ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಬರದ ಪರಿಣಾಮ ಜಿಲ್ಲೆಯ ಅನೇಕ ಗ್ರಾಮಗಳಲ್ಲಿ ಕೃಷಿಯನ್ನೇ ಅವಲಂಬಿಸಿರುವ ಕುಟುಂಬಗಳು ಜೀವನೋಪಾಯಕ್ಕಾಗಿ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ರೈತರ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ತುರ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಶಾಸಕ ಬಸನಗೌಡ ದದ್ದಲ್ ಮನವಿ ಮಾಡಿದರು

ರೈತರಿಗೆ ₹50 ಸಾವಿರ ಬರ ಪರಿಹಾರ, ಸಾಲಮನ್ನಾ ಮಾಡಿ: ಸರ್ಕಾರಕ್ಕೆ ಶಾಸಕ ಶಿವರಾಜ ಪಾಟೀಲ ಆಗ್ರಹ

ನಿರ್ಮಾಣವಾಗುತ್ತಿದೆ. ಸರ್ಕಾರ ರೈತರ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸಿ ಕೃಷಿ ಕ್ಷೇತ್ರಕ್ಕೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದರು.

ಈ ಬಾರಿ ಹತ್ತಿ ಸೇರಿದಂತೆ ವಿವಿಧ ಬೆಳೆಗಳು ಬರದ ಹೊಡೆತಕ್ಕೆ ತುತ್ತಾಗಿವೆ. ಹತ್ತಿ ಬೆಳೆಗೆ ಪಿಂಕ್ ಬೋಲ್‌ವರ್ಮ್ ಕಾಟವೂ ಹೆಚ್ಚಾಗಿದ್ದು, ಬೆಳೆ ಹಾನಿ, ಉತ್ಪಾದನೆ ಕುಸಿತ ಮತ್ತು ಕೃಷಿ ವೆಚ್ಚದ ಏರಿಕೆಯಿಂದ ರೈತರು ಮತ್ತಷ್ಟು ನಷ್ಟ ಅನುಭವಿಸುತ್ತಿದ್ದಾರೆ. ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ತಮಗೆ ಬಾಲ್ಯದಿಂದಲೇ ಕೃಷಿಯ ನೇರ ಅನುಭವವಿದ್ದು, ರೈತರ ನೋವು-ಕಷ್ಟಗಳನ್ನು ಹತ್ತಿರದಿಂದ ಕಂಡಿದ್ದೇನೆ. ರೈತರು ಉಳಿದರೆ ಮಾತ್ರ ದೇಶ ಉಳಿಯುತ್ತದೆ. ಆದ್ದರಿಂದ ತಕ್ಷಣ ಬರ ಪರಿಹಾರ, ಸಾಲಮನ್ನಾ ಹಾಗೂ ಕೃಷಿ ಚಟುವಟಿಕೆಗಳಿಗೆ ಅಗತ್ಯ ನೆರವು ಒದಗಿಸಬೇಕು ಎಂದು ಶಾಸಕ ಶಿವರಾಜ ಪಾಟೀಲ ಒತ್ತಾಯಿಸಿದರು.

ಬರದಿಂದ ಜಾನುವಾರುಗಳಿಗೂ ಮೇವಿನ ಕೊರತೆ ಎದುರಾಗಿದ್ದು, ಅವುಗಳನ್ನು ಸಾಕುವುದು ರೈತರಿಗೆ ಹೊರೆಯಾಗಿದೆ. ಸರ್ಕಾರ ಕೂಡಲೇ ಮೇವು ಬ್ಯಾಂಕ್‌ಗಳನ್ನು ಸ್ಥಾಪಿಸಿ, ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ರೈತ ಸಮುದಾಯವನ್ನು ಸಂಕಷ್ಟದಿಂದ ಹೊರತರಲು ಸಮಗ್ರ ಪರಿಹಾರ ಕ್ರಮಗಳನ್ನು ಜಾರಿಗೊಳಿಸಬೇಕು ಎಂದು ಅವರು ಮನವಿ ಮಾಡಿದರು.

ಆ.9ರಂದು ಪ್ರತಿಭಾ ಪುರಸ್ಕಾರ, ಮೀಸಲಾತಿ ವಿಚಾರ ಸಂಕಿರಣ: ವೆಂಕಟೇಶ ನಾಯಕ ಅಸ್ಕಿಹಾಳಫಿ

ದದ್ದಲ್ ಉದ್ಘಾಟಿಸಲಿದ್ದಾರೆ. ಸಂಸದ ಜಿ. ಕುಮಾರ ನಾಯಕ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಲಿದ್ದು, ಶಾಸಕ ಡಾ. ಎಸ್. ಶಿವರಾಜ ಪಾಟೀಲ್ ಜ್ಯೋತಿ ಬೆಳಗಿಸಲಿದ್ದಾರೆ ಎಂದು ಹೇಳಿದರು.

ಮಾಜಿ ಸಚಿವ ಎನ್.ಎಸ್. ಭೋಸರಾಜು, ಶಾಸಕರಾದ ಆರ್. ಬಸನಗೌಡ ತುರುವಿಹಾಳ, ಹಂಪನಗೌಡ ಬಾದರ್ಲಿ, ಜಿ. ಹಂಪಯ್ಯ ನಾಯಕ, ಕರೆಮ್ಮ ಜಿ. ನಾಯಕ, ಮಾನಪ್ಪ ಡಿ. ವಜ್ಜಲ್, ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಸೇರಿದಂತೆ ಹಲವು ಜನಪ್ರತಿನಿಧಿಗಳು, ಮಾಜಿ ಸಂಸದರು, ಮಾಜಿ ಸಚಿವರು, ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಪಾಲ್ಗೊಳ್ಳಲಿದ್ದಾರೆ.

ಮಧ್ಯಾಹ್ನ ನಡೆಯುವ ವಿಚಾರ ಸಂಕಿರಣದಲ್ಲಿ ಮಾಜಿ ಲೋಕಸಭಾ ಸದಸ್ಯ ವಿ.ಎಸ್. ಉಗ್ರಪ್ಪ ಅವರು ಎಸ್‌ಸಿ, ಎಸ್‌ಟಿ ಹಾಗೂ ಒಬಿಸಿ ಸಮುದಾಯಗಳಿಗೆ 56% ಮೀಸಲಾತಿ ಕಾನೂನನ್ನು ಸಂವಿಧಾನದ 9ನೇ ಅನುಸೂಚಿಗೆ ಸೇರಿಸುವ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ವಿದ್ಯಾರ್ಥಿಗಳು, ಪೋಷಕರು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ವೆಂಕಟೇಶ ನಾಯಕ ಅಸ್ಕಿಹಾಳ ಮನವಿ ಮಾಡಿದರು. ರಾಘವೇಂದ್ರ ನಾಯಕ, ನರಸರೆಡ್ಡಿ, ನರಸಿಂಹಲು, ವಿರೇಶ್ ನಾಯಕ ಹಾಗೂ ನರಸಿಂಹ ನಾಯಕ ಉಪಸ್ಥಿತರಿದ್ದರು.

ಆ.10ಕ್ಕೆ ರಾಯಚೂರಿನಲ್ಲಿ ಕಾರ್ಮಿಕ-ರೈತರ ಶಕ್ತಿ ಪ್ರದರ್ಶನ

ಒತ್ತಾಯಿಸಿದರು.

ಸರ್ಕಾರಿ ಹಾಗೂ ಅರಣ್ಯ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ಮತ್ತು ಫಾರಂ17ರಡಿ ಅರ್ಜಿ ಸಲ್ಲಿಸಿರುವ ಅರ್ಹ ರೈತರಿಗೆ ಹಕ್ಕುಪತ್ರ ನೀಡಬೇಕು. ರೈತರ ಕೃಷಿ ಸಾಲ ಮನ್ನಾ ಮಾಡಿ ಬೆಳೆಗಳಿಗೆ ನ್ಯಾಯಯುತ ಬೆಲೆ ಖಾತರಿಪಡಿಸಬೇಕು. ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಗ್ರಾಮೀಣ ಬಡವರಿಗೆ ವರ್ಷಕ್ಕೆ 250 ದಿನಗಳ ಉದ್ಯೋಗ ನೀಡಬೇಕು ಎಂದು ಆಗ್ರಹಿಸಿದರು.

ಹೋರಾಟಕ್ಕೆ ಟಿಯುಸಿಐ ಗೆ ಸಂಯೋಜಿತ ವಿವಿಧ ಕಾರ್ಮಿಕ ಸಂಘಟನೆಗಳು ಹಾಗೂ ಕರ್ನಾಟಕ ರೈತ ಸಂಘ ಎಐಕೆಕೆಎಸ್ ನ ಜಿಲ್ಲಾ ಮತ್ತು ತಾಲೂಕು ಸಮಿತಿಗಳು ಬೆಂಬಲ ನೀಡಲಿವೆ. ಕಾರ್ಮಿಕರು, ರೈತರು, ಕೃಷಿ ಕಾರ್ಮಿಕರು, ದಲಿತರು, ಬಡವರು, ಮಹಿಳೆಯರು ಹಾಗೂ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಹೋರಾಟ ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ರೈತ ಸಂಘ ಜಿಲ್ಲಾಧ್ಯಕ್ಷ ಮಲ್ಲಯ್ಯ ಕಟ್ಟಿಮನಿ, ಬಸವರಾಜ್, ಮಲ್ಲೇಶ್ ಹಟ್ಟಿ, ನಿರಂಜನ್ ಕುಮಾರ್ ಹಾಗೂ ಶಫಿದ್ದಿನ್ ಉಪಸ್ಥಿತರಿದ್ದರು.

ನಿವೇಶನ ಹಂಚಿಕೆ ವಿಳಂಬ, ಸರ್ಕಾರಿ ಜಮೀನು ಒತ್ತುವರಿ ಖಂಡಿಸಿ ಕರವೇ ಪ್ರತಿಭಟನೆ

ವಿಜಯನಗರ,ಆ.06–

ಕಡುಬಡವರಿಗೆ ನಿವೇಶನ ಹಂಚಿಕೆ ವಿಳಂಬ ಹಾಗೂ ಸರ್ಕಾರಿ ಜಮೀನುಗಳ ಅಕ್ರಮ ಒತ್ತುವರಿ ವಿರುದ್ಧ ಕರ್ನಾಟಕ ರಕ್ಷಣಾ ವೇದಿಕೆ (ಸ್ವಾಭಿಮಾನಿ ಸೇನೆ) ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಜಿಲ್ಲಾಡಳಿತಕ್ಕೆ ಎರಡು ಪ್ರತ್ಯೇಕ ಮನವಿ ಪತ್ರಗಳನ್ನು ಸಲ್ಲಿಸಿತು.

ಒಂದು ವರ್ಷದ ಹಿಂದೆ ಸರ್ಕಾರ ಆಹ್ವಾನಿಸಿದ್ದ ನಿವೇಶನ ಅರ್ಜಿಗಳ ಕುರಿತು ಇದುವರೆಗೆ ಯಾವುದೇ ಸ್ಪಷ್ಟ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ ಪ್ರತಿಭಟನಾಕಾರರು, ಸಾವಿರಾರು ಬಡ ಕುಟುಂಬಗಳ ಅರ್ಜಿಗಳು ಕಚೇರಿಗಳಲ್ಲೇ ಬಾಕಿ ಉಳಿದಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅರ್ಹ ಫಲಾನುಭವಿಗಳಿಗೆ ತಕ್ಷಣ ನಿವೇಶನ ಹಂಚಿಕೆ ಪ್ರಕ್ರಿಯೆ ಆರಂಭಿಸಲು ಶಾಸಕರನ್ನು ಒಳಗೊಂಡ ಸಮಿತಿ ರಚಿಸಬೇಕು ಎಂದು ಒತ್ತಾಯಿಸಿದ ಅವರು, ಹಿಂದಿನ ಜಿಲ್ಲಾಧಿಕಾರಿ ಗೌರಿ ತ್ರಿವೇದಿ ಅವರಂತೆ ಹಾಲಿ ಜಿಲ್ಲಾಧಿಕಾರಿಯೂ ರಾಜಕೀಯ ಒತ್ತಡಕ್ಕೆ ಮಣಿಯದೆ ಬಡವರ ಪರವಾಗಿ ದೃಢ ನಿರ್ಧಾರ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಮತ್ತೊಂದು ಮನವಿಯಲ್ಲಿ, ಹೊಸಪೇಟೆ ನಗರ ವ್ಯಾಪ್ತಿಯ ಹಲವು ಸರ್ವೆ ಸಂಖ್ಯೆಗಳ ಸರ್ಕಾರಿ ಜಮೀನುಗಳನ್ನು ನಕಲಿ ದಾಖಲೆಗಳು, ಅಕ್ರಮ ನೋಂದಣಿ ಹಾಗೂ ಪಾಲು ವಿಭಾಗದ ಮೂಲಕ ಖಾಸಗಿ ಹೆಸರಿಗೆ ವರ್ಗಾಯಿಸಲು ಯತ್ನಿಸಿರುವ ಆರೋಪಗಳನ್ನು ಸಂಘಟನೆ ಮುಂದಿಟ್ಟಿತು.

ಈ ಕುರಿತು ಹಲವು ಬಾರಿ ದೂರು ಮತ್ತು ಮನವಿ ಸಲ್ಲಿಸಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಸಮರ್ಪಕ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ ಸಂಘಟನೆ, ಅಕ್ರಮ ಒತ್ತುವರಿದಾರರು ಹಾಗೂ ನಕಲಿ ದಾಖಲೆ ಸೃಷ್ಟಿಸಿದವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿತು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ತಾರಿಹಳ್ಳಿ ಹನುಮಂತಪ್ಪ, ಎಸ್.ಎಲ್. ಜಾಫರ್, ಎನ್.ಎಸ್. ಶ್ರೀನಿವಾಸ್, ಈಡಿಗರ ರಮೇಶ್, ಪ್ರಶಾಂತ್ ನಾಯ್ಕ್, ರಾಮಕೃಷ್ಣ, ಸುವರ್ಣ ರತ್ನ, ಶಮಾ, ಬಾನು ಬಿ, ಸುಮಾ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ವಿದ್ಯಾರ್ಥಿಗಳ ಪ್ರತಿಭಟನೆಗೆ ಮಣಿದ ವಿಎಸ್‌ಕೆ ವಿಶ್ವವಿದ್ಯಾಲಯ: 1,100 ರೂ. ಶುಲ್ಕ ಇಳಿಕೆ, ಹೆಚ್ಚುವರಿ ಹಣ..



ವಿಜಯನಗರ, ಆ.7–

ಎಐಡಿಎಸ್‌ಓ ನೇತೃತ್ವದಲ್ಲಿ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಪದವಿ ವಿದ್ಯಾರ್ಥಿಗಳ ಪ್ರವೇಶ ಶುಲ್ಕ ಹೆಚ್ಚಳ ಖಂಡಿಸಿ ಬುಧವಾರ ನಡೆದ ವಿಶ್ವವಿದ್ಯಾಲಯ ಚಲೋ ಪ್ರತಿಭಟನೆಗೆ ಸ್ಪಂದಿಸಿದ ವಿಶ್ವವಿದ್ಯಾಲಯ ಆಡಳಿತ ಮಹತ್ವದ ನಿರ್ಧಾರ ಕೈಗೊಂಡಿದೆ.

ಪ್ರತಿಭಟನೆಯ ಬಳಿಕ ಕುಲಪತಿ ಪ್ರೊ. ಮುನಿರಾಜು ಅವರು ದ್ವಿತೀಯ ಹಾಗೂ ತೃತೀಯ ವರ್ಷದ ವಿದ್ಯಾರ್ಥಿಗಳ ಪ್ರವೇಶ ಶುಲ್ಕದಲ್ಲಿ 1,100 ರೂ. ಇಳಿಕೆ ಮಾಡಲಾಗುವುದು. ಈಗಾಗಲೇ ವಿದ್ಯಾರ್ಥಿಗಳು ಪಾವತಿಸಿರುವ ಹೆಚ್ಚುವರಿ ಶುಲ್ಕವನ್ನು ಮರುಪಾವತಿಸಲಾಗುವುದು ಎಂದು ಘೋಷಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಎಐಡಿಎಸ್‌ಓ ರಾಜ್ಯ ಖಜಾಂಚಿ ಸುಭಾಷ್ ಬೆಟ್ಟದಕೊಪ್ಪ, ಬರಗಾಲದಿಂದ ಸಂಕಷ್ಟದಲ್ಲಿರುವ ಬಳ್ಳಾರಿ ವಿಜಯನಗರ ಭಾಗದ ವಿದ್ಯಾರ್ಥಿಗಳ ಮೇಲೆ ಶುಲ್ಕ ಹೆಚ್ಚಳ ಹೆಚ್ಚುವರಿ ಹೊರೆ ತಂದಿದ್ದು, ಸರ್ಕಾರ ಹಾಗೂ ವಿಶ್ವವಿದ್ಯಾಲಯ ಆಡಳಿತ ಸಂಪೂರ್ಣ ಶುಲ್ಕ ಏರಿಕೆಯನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಅಧ್ಯಕ್ಷ ರವಿಕಿರಣ್, ಮುಖಂಡ ಕೆ. ಈರಣ್ಣ ಸೇರಿದಂತೆ ಹಲವರು ಮಾತನಾಡಿ, ಶುಲ್ಕ ಏರಿಕೆಯಿಂದ ಬಡ ಹಾಗೂ ಗ್ರಾಮೀಣ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೀವ್ರ ತೊಂದರೆಯಾಗುತ್ತಿದೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಎಐಡಿಎಸ್‌ಓ ಜಿಲ್ಲಾ ಕಾರ್ಯದರ್ಶಿ ಕಂಬಳಿ ಮಂಜುನಾಥ್, ಉಪಾಧ್ಯಕ್ಷೆ ಎಂ. ಶಾಂತಿ, ಕಚೇರಿ ಕಾರ್ಯದರ್ಶಿ ನಿಹಾರಿಕಾ ಹಾಗೂ ವಿದ್ಯಾರ್ಥಿಗಳಾದ ಸುಹಾಸ್, ಸಿದ್ದು, ರಾಜಶೇಖರ್ ಸಿದ್ದೇಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಬೆಳೆ ವಿಮೆ ಪರಿಹಾರ ನೀಡಲು ಕ್ರಮ ವಹಿಸಿ: ಸಚಿವರಾದ ಶಿವರಾಜ ತಂಗಡಗಿ

ಕೊಪ್ಪಳ ಆ.07–

ಜಿಲ್ಲೆಯಲ್ಲಿ ಮುಂಗಾರು ಮಳೆಯ ತೀವ್ರ ಕೊರತೆಯಿಂದ ಬಹುತೇಕ ಎಲ್ಲ ತಾಲ್ಲೂಕುಗಳಲ್ಲಿ ಶೇ.80 ರಷ್ಟು ಬೆಳೆ ಹಾನಿ ಸಂಭವಿಸಿದೆ. ಇದರಿಂದ ತೀವ್ರ ಆರ್ಥಿಕ ಸಂಕಷ್ಟದಲ್ಲಿರುವ ರೈತರಿಗೆ ವಿಮಾ ಕಂಪನಿಗಳು ಶೇ.25 ರಷ್ಟು ಮಧ್ಯಂತರ ಬೆಳೆ ವಿಮೆ ಪರಿಹಾರವನ್ನು ನೀಡಬೇಕು. ಈ ಬಗ್ಗೆ ಜಿಲ್ಲಾಧಿಕಾರಿಗಳು ವಿಮಾ ಕಂಪನಿಗಳಿಗೆ ಸೂಕ್ತ ನಿರ್ದೇಶನ ನೀಡಿ ಅಗತ್ಯ ಕ್ರಮ ವಹಿಸಬೇಕು ಎಂದು ಕೊಪ್ಪಳ ಜಿಲ್ಲೆಯ ಬರ ನಿರ್ವಹಣೆಯ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರು ಸೂಚಿಸಿದರು.

ಗುರುವಾರದಂದು ಜಿಲ್ಲಾ ಪಂಚಾಯತ್‌ನ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕೊಪ್ಪಳ ಜಿಲ್ಲೆಯ ಬರ ಪರಿಸ್ಥಿತಿ, ಬೆಳೆ ಹಾನಿ ಸೇರಿದಂತೆ ಇತರೆ ವಿಷಯಗಳ ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ಎರಡು ದಿನಗಳಿಂದ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಅಧಿಕಾರಿಗಳೊಂದಿಗೆ ಬರ ಪರಿಸ್ಥಿತಿ ಹಾಗೂ ಬೆಳೆ ಹಾನಿ ಕುರಿತು ಖುದ್ದು ಪರಿಶೀಲನೆ ಮಾಡಿದ್ದೇನೆ. ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿ ಬಹುತೇಕ ಶೇ.80 ಕ್ಕೂ ಹೆಚ್ಚು ಬೆಳೆ ಹಾನಿ ಸಂಭವಿಸಿದೆ. ಮುಂಗಾರು ಮಳೆ ಕೊರತೆಯಾಗಿದ್ದು, ಈಗಾಗಲೇ ಬಿತ್ತನೆ ಮಾಡಿದ ಬಹುತೇಕ ಬೆಳೆಗಳು ನಾಶವಾಗಿವೆ. ಇದರಿಂದ ರೈತ ಮಾಡಿದ ಖರ್ಚನ್ನು ಸಹ ಪಡೆಯಲಾರ. ಆದ್ದರಿಂದ ಈಗಾಗಲೇ ಬೆಳೆ ವಿಮೆಗೆ ನೋಂದಾಯಿಸಿದ ರೈತರಿಗೆ ಒಟ್ಟು ಬೆಳೆ ವಿಮೆಯ ಶೇ.25 ರಷ್ಟನ್ನು ಮಧ್ಯಂತರ ಪರಿಹಾರವಾಗಿ ವಿಮಾ ಕಂಪನಿಗಳು ನೀಡಬೇಕು. ಈ ಬಗ್ಗೆ ಜಿಲ್ಲಾಧಿಕಾರಿಗಳು ನಿಯಮಿತವಾಗಿ ಪರಿಶೀಲನೆ ನಡೆಸಿ ರೈತರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಮುಂಗಾರು ಮಳೆಯಾಧಾರಿತ ಬೆಳೆಗಳು ಹಾನಿಯಾದ ಹಿನ್ನೆಲೆಯಲ್ಲಿ ರೈತರಿಗೆ ಬದಲಾದ ಹವಾಮಾನಕ್ಕೆ ಅನುಗುಣವಾಗಿ ಬೆಳೆಯ ಬಹುದಾದ ಪರ್ಯಾಯ ಬೆಳೆಗಳ ಬಗ್ಗೆ ಅರಿವು ಮೂಡಿಸಿ. ಬೆಳೆ ವಿಮೆಗೆ ನೋಂದಣಿ ಮಾಡಲು ಅವಧಿ ವಿಸ್ತರಣೆಗೆ ಅವಕಾಶ ವಿದ್ದಲ್ಲಿ ಆ ಬಗ್ಗೆ ಕ್ರಮ ವಹಿಸಿ. ಎಲ್ಲ ತಾಲ್ಲೂಕುಗಳ ತಹಶೀಲ್ದಾರರು, ಕಾರ್ಯ ನಿರ್ವಾಹಕ ಅಧಿಕಾರಿಗಳು, ಕೃಷಿ ಇಲಾಖೆ ಅಧಿಕಾರಿಗಳು, ಪಿಡಿಓ ಗಳು, ಸೇರಿದಂತೆ ಎಲ್ಲ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರಬೇಕು. ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕು. ವಿಮಾ ಕಂಪನಿಗಳು ಅನಗತ್ಯ ಕಾರಣಗಳನ್ನು ನೀಡಿ ವಿಮೆ ಪರಿಹಾರವನ್ನು ತಿರಸ್ಕರಿಸುವಂತಿಲ್ಲ ಎಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಳೆ ವಿಮೆಯಂತೆ ಕುಡಿಯುವ ನೀರು ಪೂರೈಕೆಗೂ ಅಧಿಕಾರಿಗಳು ಆದ್ಯತೆ ನೀಡಬೇಕು. ಸರ್ಕಾರದಿಂದ ಪ್ರತಿ ತಾಲ್ಲೂಕಿಗೂ ರೂ.1 ಕೋಟಿ ಅನುದಾನವನ್ನು ಕುಡಿಯುವ ನೀರಿನ ಪೂರೈಕೆಗಾಗಿ ನೀಡಲಾಗಿದೆ. ಹೊಸ ಬೋರ್‌ವೆಲ್‌ಗಳು, ಪೈಪ್‌ಲೈನ್ ಸಂಪರ್ಕ, ದುರಸ್ತಿ, ಬಾಡಿಗೆ ಬೋರ್‌ವೆಲ್ ಪಡೆಯುವುದು ಮುಂತಾದ ಕುಡಿಯುವ ನೀರು ಪೂರೈಕೆಗೆ ಅನುಕೂಲವಾಗುವ ಯೋಜನೆಗಳಿಗೆ, ಕಾರ್ಯಗಳಿಗೆ ಅಧಿಕಾರಿಗಳು ಕ್ರಿಯಾ ಯೋಜನೆ ಸಿದ್ದಪಡಿಸಿ, ಸಂಬಧಿಸಿದ ಶಾಸಕರ ಅನುಮೋದನೆ ಪಡೆಯಬೇಕು. ಬರ ಪರಿಸ್ಥಿತಿಯಿಂದ ಕುಡಿಯುವ ನೀರಿನ ಸಮಸ್ಯೆಯೂ ಮುಂದಿನ ದಿನಗಳಲ್ಲಿ ತೀವ್ರವಾಗುವ ಸಾಧ್ಯತೆ ಇರುವುದರಿಂದ ಸೂಕ್ತ ಯೋಜನೆ ರೂಪಿಸಿ, ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಿ ಎಂದು ಅಧಿಕಾರಿಗಳಿಗೆ ಸಚಿವರು ತಿಳಿಸಿದರು.

ಮಳೆ ಕೊರತೆಯು ಕೇವಲ ರೈತರಿಗೆ ಮಾತ್ರವಲ್ಲ ಜಾನುವಾರುಗಳಿಗೂ ಸಂಕಷ್ಟ ತಂದಿದೆ. ಆದ್ದರಿಂದ ಜಿಲ್ಲೆಯಲ್ಲಿ ಮೇವು ಕೊರತೆಯಾಗದಂತೆ ಕ್ರಮ ವಹಿಸಬೇಕು. ಅಗತ್ಯವಿದ್ದಲ್ಲಿ ರೈತರಿಗೆ ಮೇವಿನ ಕಿಟ್, ಮೇವು ಬ್ಯಾಂಕ್ ಸ್ಥಾಪಿಸಬೇಕು. ಕೃಷಿ ಕೆಲಸವಿಲ್ಲದೆ ತೊಂದರೆ ಅನುಭವಿಸುತ್ತಿರುವ ರೈತರಿಗೆ, ಗ್ರಾಮೀಣರಿಗೆ ವಿಬಿ-ಜಿ ರಾಮ್ ಜಿ ಯೋಜನೆಯಡಿ ನಾಳೆಯಿಂದಲೇ ಪ್ರತಿ ತಾಲ್ಲುಕಿನಲ್ಲೂ ಮಾನವ ದಿನಗಳನ್ನು ಸೃಜಿಸಿ ಉದ್ಯೋಗ ನೀಡಬೇಕು. ಸಮುದಾಯಿಕ ಹಾಗೂ ವೈಯಕ್ತಿಕ ಕಾಮಗಾರಿಗಳು, ಅಭಿವೃದ್ಧಿ ಕಾಮಗಾರಿಗಳಿಗೆ ಮಾನವ ದಿನಗಳನ್ನು ಸೃಜಿಸಿ ರೈತರಿಗೆ ಉದ್ಯೋಗ ಒದಗಿಸಬೇಕು. ಗ್ರಾಮೀಣ ಪ್ರದೇಶದಲ್ಲಿ ಕೇವಲ 5 ಗಂಟೆಗಳು ಮಾತ್ರ ವಿದ್ಯುತ್ ಪೂರೈಕೆ ಮಾಡುತ್ತಿರುವುದಾಗಿ ರೈತರು ದೂರು ನೀಡಿದ್ದು, ಜೆಸ್ಕಾಂ ನಿಂದ ಅಗತ್ಯವಿರುವ ಎಲ್ಲ ಕಡೆ ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಸಂಬಧಿಸಿದ ಇಲಾಖಾ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಮಾತನಾಡಿ, ಜಿಲ್ಲೆಯಲ್ಲಿ 2026 ರ ಜೂನ್ 1 ರಿಂದ ಆಗಸ್ಟ್ 4 ರವರೆಗೆ ವಾಡಿಕೆ ಮಳೆ 155.7 ಮಿ.ಮೀ. ಆಗಬೇಕಿತ್ತು. ಆದರೆ ಕೇವಲ 98.5 ಮಿ.ಮೀ. ಮಳೆಯಾಗಿದೆ. ಗಂಗಾವತಿ ಹಾಗೂ ಕಾರಟಗಿ ತಾಲ್ಲೂಕುಗಳಲ್ಲಿ ತೀವ್ರ ಮಳೆ ಕೊರತೆಯಾಗಿದ್ದು, ಉಳಿದ ತಾಲ್ಲೂಕುಗಳಲ್ಲಿಯೂ ಮಳೆ ಕೊರತೆಯಾಗಿದೆ. ಬಿತ್ತನೆ ಗುರಿ 3,49,892 ಹೆಕ್ಟೇರ್ ಇದ್ದು, ಇದುವರೆಗೂ 2,41,995 ಹೆಕ್ಟೇರ್ ಮಾತ್ರ ಬಿತ್ತನೆಯಾಗಿದ್ದು, ಒಟ್ಟಾರೆ ಶೇ.69 ರಷ್ಟು ಬಿತ್ತನೆ ಕಾರ್ಯ ಪೂರ್ಣಗೊಂಡಿದೆ. ಕಳೆದ ವರ್ಷ 3,74,000 ಹೆಕ್ಟೇರ್ ಬಿತ್ತನೆಯಾಗಿತ್ತು. ಜಿಲ್ಲೆಯಾದ್ಯಂತ ಒಟ್ಟು 1,90,667 ಹೆಕ್ಟೇರ್ ಬೆಳೆ ಹಾನಿಯಾಗಿದೆ. ಮುಂಗಾರು ಮಳೆ ಕೊರತೆಯಾದ್ದರಿಂದ ರೈತರು ಹಿಂಗಾರು ಬೆಳೆಗೆ ಸಿದ್ಧತೆ ನಡೆಸಿದ್ದಾರೆ. ಬದಲಾದ ಹವಾಮಾನಕ್ಕೆ ಅನುಗುಣವಾಗಿ ಪರ್ಯಾಯ ಬೆಳೆ ಬೆಳೆಯಲು ರೈತರಿಗೆ ತಿಳಿಸಲಾಗಿದೆ ಎಂದು ಸಚಿವರಿಗೆ ಮಾಹಿತಿ ನೀಡಿದರು.

ಸಭೆಯಲ್ಲಿ ವಿಧಾನಸಭೆಯ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗು ಕುಷ್ಟಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ದೊಡ್ಡನಗೌಡ ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಕೊಪ್ಪಳ ಕೆ.ಪಿ. ಮೋಹನರಾಜ್, ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಬಳ್ಳಾರಿ ಜಿಲ್ಲೆಯಲ್ಲಿ ತೀವ್ರ ಬರ ಪರಿಸ್ಥಿತಿ: ಮಳೆ ಕೊರತೆಯಿಂದ ಒಣಗುತ್ತಿರುವ ಬೆಳೆಗಳು, ಶೀಘ್ರ ವರದಿ ಸಲ್ಲಿಕೆಗೆ ಸಚಿವ ಬಿ.ನಾಗೇಂದ್ರ ಅಧಿಕಾರಿಗಳಿಗೆ ಸೂಚನೆ

ಬಳ್ಳಾರಿ,ಆ.07–

ಜಿಲ್ಲೆಯಾದ್ಯಂತ ಮಳೆ ಅಭಾವ ಮತ್ತು ಬೆಳೆ ಹಾನಿಯ ಕುರಿತು ತಕ್ಷಣವೇ ಸಮಗ್ರ ಜಂಟಿ ಸಮೀಕ್ಷೆ ನಡೆಸಿ ಶೀಘ್ರ ವರದಿ ಸಲ್ಲಿಸುವಂತೆ ಬಳ್ಳಾರಿ ಜಿಲ್ಲೆ ಬರ ಪರಿಸ್ಥಿತಿ ವೀಕ್ಷಣೆಗೆ ನಿಯೋಜಿಸಲಾಗಿರುವ ಸಚಿವರಾದ ಬಿ.ನಾಗೇಂದ್ರ ಅವರು ಕೃಷಿ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಗುರುವಾರ, ಬಳ್ಳಾರಿ ತಾಲ್ಲೂಕಿನ ಹಲಕುಂದಿ, ಮಿಂಚೇರಿ ಗ್ರಾಮದಲ್ಲಿ ಬರಪ ರಿಸ್ಥಿತಿ ಹಿನ್ನಲೆಯಲ್ಲಿ ಬೆಳೆಹಾನಿ ಪರಿವೀಕ್ಷಣೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಸಕಾಲಕ್ಕೆ ಮಳೆ ಯಾಗದೆ ಕೃಷಿ ವಲಯ ತೀವ್ರ ಸಂಕಷ್ಟಕ್ಕೆ ಸಿಲುಕಿದೆ. ಜಿಲ್ಲೆಯಲ್ಲಿ ರೈತರು ಬಿತ್ತನೆ ಕಾರ್ಯ ಮಾಡಿದ್ದರೂ, ಕಳೆದ ಎರಡು ತಿಂಗಳಿದ ಹನಿ ಮಳೆಯೂ ಬಾರದೆ ಬೆಳೆಗಳು ಜಮೀನಿನಲ್ಲೇ ಒಣಗಿ ನಶಿಸುತ್ತಿವೆ. ಕಂದಾಯ ಮತ್ತು ಕೃಷಿ ಇಲಾಖೆಗಳ ಅಧಿಕಾರಿಗಳು ಜಂಟಿಯಾಗಿ ಪ್ರತಿಯೊಂದು ತಾಲೂಕಿನ ಬೆಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ, ನೈಜ ಪರಿಸ್ಥಿತಿಯ ಆಧಾರದ ಮೇಲೆ ನಿಖರ ವರದಿ ಸಿದ್ದಪಡಿಸ ಬೇಕು ಎಂದು ನಿರ್ದೇಶನ ನೀಡಿದರು.

ತೊಗರಿ, ಹತ್ತಿ, ಮೆಕ್ಕೆಜೋಳ ಹಾಗೂ ಸಜ್ಜೆ ಸೇರಿದಂತೆ ಪ್ರಮುಖ ಬೆಳೆಗಳು ನೀರಿನ ಅಭಾವದಿಂದ ಬಾಡಿಹೋಗುತ್ತಿದ್ದು, ರೈತರಿಗೆ ಭಾರಿ ನಷ್ಟ ಉಂಟಾಗುವ ಭೀತಿ ಎದುರಾಗಿದೆ. ಅಧಿಕಾರಿಗಳು ನೀಡುವ ಸಮೀಕ್ಷಾ ವರದಿಯ ಆಧಾರದ ಮೇಲೆ ಬರಪೀಡಿತ ಪ್ರದೇಶಗಳ ಘೋಷಣೆ ಹಾಗೂ ರೈತರಿಗೆ ಪರಿಹಾರ ಒದಗಿಸುವ ಕುರಿತು ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಮಳೆ ಬಂದರೂ ಶೇ. 50ರಷ್ಟು ಇಳುವರಿಯೂ ಸಿಗಲಾರದು:

ಬಿತ್ತನೆಯಾಗಿ 50ರಿಂದ 60 ದಿನಗಳು ಕಳೆದಿವೆ. ಬೆಳೆ ಬೆಳವಣಿಗೆಯ ಹಂತದಲ್ಲೇ ಮಳೆ ಇಲ್ಲದೆ ಗಿಡಗಳ ಬೆಳವಣಿಗೆ ಸಂಪೂರ್ಣ ಕುಂಠಿತಗೊಂಡಿದೆ ಇನ್ನು ಮುಂದಿನ 10 ದಿನಗಳಲ್ಲಿ ಮಳೆ ಬಂದರೂ ಸಹ ಶೇ. 50ರಷ್ಟು ಕೂಡ ಇಳುವರಿ ಪಡೆಯಲು ಸಾಧ್ಯವಿಲ್ಲ, ಬೆಳೆಗಳು ಈಗಾಗಲೇ ಹಾನಿಗೊಳಗಾಗಿವೆ ಎಂದು ಕೃಷಿ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಸಚಿವರಿಗೆ ಮನವರಿಕೆ ಮಾಡಿಕೊಟ್ಟರು. ಶನಿವಾರದೊಳಗೆ ವರದಿ ಸಲ್ಲಿಕೆಗೆ ಸೂಚನೆ: ಸರ್ಕಾರದ ನಿಗದಿತ ಮಾನದಂಡಗಳ ಆಧಾರದ ಮೇಲೆ ಕಂದಾಯ ಸಚಿವರೊಂದಿಗೆ ಚರ್ಚಿಸಿ, ಮುಂದಿನ ಸೂಕ್ತ ಕ್ರಮ ಹಾಗೂ ಪರಿಹಾರ ಘೋಷಣೆ ಕುರಿತು ತೀರ್ಮಾನ ಕೈಗೊಳ್ಳಲಾಗುವುದು. ಹಾಗಾಗಿ ಜಿಲ್ಲೆಯ ತಾಲ್ಲೂಕುವಾರು ಬೆಳೆ ಹಾನಿ ಹಾಗೂ ಕೃಷಿ ಸ್ಥಿತಿಗತಿಯ ಸಮಗ್ರ ವರದಿಯನ್ನು ಶನಿವಾರದೊಳಗೆ ಸಿದ್ಧಪಡಿಸಿ ಸಲ್ಲಿಸುವಂತೆ ಸಚಿವ ಬಿ. ನಾಗೇಂದ್ರ ಅವರು ಕೃಷಿ ಮತ್ತು ಕಂದಾಯ ಇಲಾಖೆಯ ಅಧಿಕಾರಿ ಗಳಿಗೆ ನಿರ್ದೇಶನ ನೀಡಿದರು.

ಬಳ್ಳಾರಿ ಜಿಲ್ಲೆಯ ಅಭಿವೃದ್ಧಿಗೆ ಕಟಿಬದ್ಧ: ಕೃಷಿ ಪರಿಸ್ಥಿತಿ ವೀಕ್ಷಣೆ ನಡೆಸಿ, ರೈತರ ಪರ ನಿಲ್ಲುವ ಅಭಯ ನೀಡಿದ ಸಚಿವ ನಾಗೇಂದ್ರ★

ಸಪುಟ ವಿಸ್ತರಣೆಯ ನಂತರ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿರ್ದೇ ಶನದಂತೆ, ರಾಜ್ಯದಾದ್ಯಂತ ಅತಿಯಾದ ಮಳೆ ಅಥವಾ ಮಳೆ ಅಭಾವದಿಂದ ತೊಂದರೆಗೊಳ ಗಾದ ರೈತರ ನೆರವಿಗೆ ಧಾವಿಸುವುದು ಸರ್ಕಾರದ ಪ್ರಮುಖ ಕರ್ತವ್ಯವಾಗಿದೆ ಎಂದು ಸಚಿವ ಬಿ.ನಾಗೇಂದ್ರ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದರು.

ಮಳೆಯ ಅಭಾವದಿಂದಾಗಿ ಎಕರೆಗೆ ಸಾವಿರಾರು ರೂಪಾಯಿ ವೆಚ್ಚ ಮಾಡಿ ತೊಗರಿ, ಹತ್ತಿ, ಸೂರ್ಯಕಾಂತಿ ಮತ್ತು ಜೋಳ ಬೆಳೆದ ಸಣ್ಣ ಹಾಗೂ ಬಡ ರೈತರಿಗೆ ಭಾರಿ ನಷ್ಟ ಉಂಟಾಗಿದೆ. ಜಿಲ್ಲಾಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರು ಹಾಗೂ ಜಿಲ್ಲಾ ಪಂಚಾಯತ್ ಸಿಇಒ ಸೇರಿದಂತೆ ಎಲ್ಲಾ ಅಧಿಕಾರಿಗಳು ಈಗಾಗಲೇ ಬೆಳೆ ನಷ್ಟದ ಸರ್ವೇ ಕಾರ್ಯದಲ್ಲಿ ತೊಡಗಿದ್ದು, ರೈತರ ಬೆನ್ನೆಲುಬಾಗಿ ನಿಲ್ಲಲು ಸರ್ಕಾರ ಬದ್ಧವಾಗಿದೆ ಎಂದರು.

ತುಂಗಭದ್ರಾ ಜಲಾಶಯ ಹಾಗೂ ನೀರಿನ ಸ್ಥಿತಿಗತಿ: ಬಳ್ಳಾರಿ ಜಿಲ್ಲೆಯ ಕೃಷಿ ಹಾಗೂ ಕುಡಿ ಯುವ ನೀರಿನ ಪ್ರಮುಖ ಆಸರೆಯಾಗಿರುವ ತುಂಗಭದ್ರಾ ಜಲಾಶಯದಲ್ಲಿ 65 ರಿಂದ 70 ಟಿಎಂಸಿ ನೀರು ತಲುಪುವ ನಿರೀಕ್ಷೆಯಿದೆ.

2026 ಮತದಾರ ಪಟ್ಟಿ ಪರಿಷ್ಕರಣೆ 100% ಪೂರ್ಣ - ಅಶೋಕ ಪವಾರ ಫಿ

ಮತದಾರ ಪಟ್ಟಿಯನ್ನು ಅಗಸ್ಟ್ 17 ಪ್ರಕಟಿಸಲಾಗುವುದು. ಅಂತಿಮ ಪಟ್ಟಿ ಅಕ್ಟೋಬರ್ 19 ಮತದಾರ ಪಟ್ಟಿ ಅಂತಿಮಗೊಳಿಸಲಾಗುತ್ತದೆ. ನೊಂದಣಿ ಪ್ರಕ್ರಿಯೆಗೆ ಮತದಾರರಿಗೆ ಯಾವುದಾರೂ ತೊಂದರೆ ಇದರೆ, ಮಾಹಿತಿಗಾಗಿ ತಹಸೀಲ್ದಾರ ಕಛೇರಿಗೆ ಬೇಟಿ ನೀಡಬಹುದು ಎಂದಿದ್ದಾರೆ

''ಸಾಂಸ್ಕೃತಿಕ ವೈಭವಕ್ಕೆ ರಾಗ-ರಂಗ ವೇದಿಕೆ ಸಜ್ಜು''


ರಾಯಚೂರು, ರಂಗಸ್ವಾಮಿ, ಚಂದ್ರಶೇಖರ್ ಎಗನೂರು ಹಾಗೂ ರಘುಕುಮಾರ್ ಸಹನಟರಾಗಿ ಅಭಿನಯಿಸಲಿದ್ದಾರೆ. ಕಲಾಬಳಗದಲ್ಲಿ ಅಶೋಕ ಭಾಸುತ್ಕರ್, ಆಂಜಿನಯ್ಯ ಜಾಲಿಬೆಂಚಿ, ಪಂಪಾಪತಿ ಹೂಗಾರ, ನರೇಂದ್ರಕುಮಾರ್, ಝಾನ್ಸಿ ರಾಣಿ, ಅಂಬಾಭವಾನಿ ಹಾಗೂ ವೀಣಾ ರಾಳುಜೇರು ಭಾಗವಹಿಸಲಿದ್ದಾರೆ.

ನಿವೃತ್ತ ನೌಕರರ ಸಂಘದ ಖಜಾಂಚಿ ಶಂಕರಗೌಡ, ಹಿರಿಯ ಸಾಹಿತಿ ಬಾಬು ಬಂಡಾರಿಗಲ್, ಉಪಾಧ್ಯಕ್ಷೆ ದಾನಮ್ಮ ಸುಭಾಷ್‌ಚಂದ್ರ, ಪ್ರಧಾನ ಕಾರ್ಯದರ್ಶಿ ಮಲ್ಲಯ್ಯ ಕಲ್ಲೂರು, ನಿವೃತ್ತ ನೌಕರರ ವೇದಿಕೆಯ ಪ್ರಧಾನ ಸಂಚಾಲಕ ಹನುಮಂತಪ್ಪ ತಿಪ್ಪಲದಿನ್ನಿ, ಮುಖ್ಯ ಸಂಚಾಲಕ ವಿಶ್ವನಾಥರೆಡ್ಡಿ, ನಿವೃತ್ತ ಸಹಾಯಕ ಖಜಾನೆ ಅಧಿಕಾರಿಗಳಾದ ರಾಮಪ್ಪ, ರಾಮುಲು ಹಾಗೂ ಹಿರಿಯ ಸಾಹಿತಿ ಆಂಜಿನಯ್ಯ ಜಾಲಿಬೆಂಚಿ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ.

ವಾದ್ಯವೃಂದದಲ್ಲಿ ಕೀ-ಬೋರ್ಡ್‌ನಲ್ಲಿ ವೀರೇಂದ್ರಕುಮಾರ್ ಕುರ್ಡಿ, ತಬಲದಲ್ಲಿ ಸುರೇಶ್‌ಕುಮಾರ್ ಆಲ್ಕೂರು ಸಹಕರಿಸಲಿದ್ದು, ಕಾರ್ಯಕ್ರಮದ ನಿರೂಪಣೆಯನ್ನು ಸುರೇಶ್‌ಕುಮಾರ್ ಆಲ್ಕೂರು ನಿರ್ವಹಿಸಲಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಚಂದ್ರಶೇಖರ್ ಎಗನೂರು ಹಾಗೂ ಎಂ. ರವಿಕುಮಾರ್ ಉಪಸ್ಥಿತರಿದ್ದರು

ನಿಮ್ಮೂರು ಸುದ್ದಿ

ಸಂಪಾದಕೀಯ

ಕಾರ್ಯಾಂಗ, ಶಾಸಕಾಂಗಗಳು ರಜೆಯ ಮೇಲಿವೆಯೆ?

ಭಾರತದ ಸುಪ್ರೀಂಕೋರ್ಟ್ ಮಂಗಳವಾರ (ಆಗಸ್ಟ್ 4) ಡಿಜಿಟಲ್ ಅರೆಸ್ಟ್ ಕುರಿತಾದ ಸುಮೊಟೊ ಪ್ರಕರಣವೊಂದರಲ್ಲಿ () . 3/2025 ಮಧ್ಯಂತರ ಆದೇಶ ನೀಡಿ, ಭಾರತೀಯ ರಿಸರ್ವ್ ಬ್ಯಾಂಕ್‌ಗೆ ಮುಂದಿನ ನಾಲ್ಕು ವಾರಗಳ ಒಳಗೆ ಡಿಜಿಟಲ್ ಅರೆಸ್ಟ್ ಪ್ರಕರಣಗಳಲ್ಲಿ ಸ್ಟಾಂಡರ್ಡ್ ಆಪರೇಟಿಂಗ್ ಪ್ರೊಸೀಜರ್ () ಒಂದನ್ನು ರೂಪಿಸಬೇಕೆಂದು ತಾಕೀತು ಮಾಡಿದೆ.

2025ರ ಅಕ್ಟೋಬರ್‌ನಲ್ಲಿ ಹರ್ಯಾಣದಲ್ಲಿ ವೃದ್ಧ ದಂಪತಿಯನ್ನು ಡಿಜಿಟಲ್ ಅರೆಸ್ಟ್‌ಗೆ ಒಳಪಡಿಸಿ ಅವರಿಂದ ಹಣ ದೋಚಿದ್ದ ಪ್ರಕರಣದ ಕುರಿತು ಸುಮೊಟೊ ಪ್ರಕರಣ ದಾಖಲಿಸಿಕೊಂಡಿದ್ದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾ. ಜಾಯಮಾಲ್ಯ ಬಾಗ್ಚಿ ಮತ್ತು ನ್ಯಾ.ಮೋಹನಾ ಅವರನ್ನೊಳಗೊಂಡ ನ್ಯಾಯಪೀಠವು ಇಂಡಿಯನ್ ಸೈಬರ್ ಕಾರ್ಡಿನೇಷನ್ ಸೆಂಟರ್ (14)ನಿಂದ ಡಿಜಿಟಲ್ ಅರೆಸ್ಟ್ ಕುರಿತಂತೆ ನಾಲ್ಕನೇ ಬಾರಿಗೆ ವಸ್ತುಸ್ಥಿತಿ ವರದಿ ತರಿಸಿಕೊಂಡಿದ್ದು, ಅದರ ಅನ್ವಯ 13 ಸೂಚನೆಗಳನ್ನು ತನ್ನ ಮಧ್ಯಂತರ ಆದೇಶದಲ್ಲಿ ನೀಡಿದೆ.

ಎಲ್ಲ ರಾಜ್ಯಗಳು ತಮ್ಮಲ್ಲಿ ಸೈಬರ್ ಅಪರಾಧ ಸಮನ್ವಯ ಕೇಂದ್ರಗಳನ್ನು ಸ್ಥಾಪಿಸಬೇಕು, ಇ-ಝೀರೊ ಎಫ್‌ಐರ್ಆ ವ್ಯವಸ್ಥೆ ಆಗಬೇಕು, ಡಿಜಿಟಲ್ ಅರೆಸ್ಟ್ ಅಪರಾಧಿಗಳಿಂದ ವಶಪಡಿಸಿಕೊಂಡ ಹಣವನ್ನು ತ್ವರಿತವಾಗಿ ಅದರ ಮಾಲಕರಿಗೆ ಹಿಂದಿರುಗಿಸಬೇಕು, ರಾಜ್ಯ ಸರಕಾರಗಳು ಡಿಜಿಟಲ್ ಅರೆಸ್ಟ್ ದೂರುಗಳನ್ನು ನಿಭಾಯಿಸಲು ರೂಪಿಸಿರುವ ವ್ಯವಸ್ಥೆಯ ಕುರಿತು ಎಲ್ಲ ಹೈಕೋರ್ಟ್‌ಗಳ ರೆಜಿಸ್ಟ್ರಾರ್‌ಗಳು ತಮ್ಮ ವ್ಯಾಪ್ತಿಯ ನ್ಯಾಯಾಲಯಗಳ ಗಮನಕ್ಕೆ ತರಬೇಕು, ಮುಂದಿನ ಬಾರಿ 14 ತನ್ನ ವಸ್ತುಸ್ಥಿತಿ ವರದಿ ಸಲ್ಲಿಸುವಾಗ, ಪ್ರತೀ ರಾಜ್ಯವಾರು, ಬ್ಯಾಂಕುವಾರು ದಾಖಲಿಸಿಕೊಂಡ, ವಿಲೇವಾರಿ ಮಾಡಿದ ಪ್ರಕರಣಗಳ ವಿವರ, ವಂಚನೆಯಾದ ಹಣ ಅದರ ಮಾಲಕರಿಗೆ ಹಿಂದಿರುಗಿಸಿದ ಪ್ರಕರಣ ಮತ್ತು ಮೊತ್ತಗಳ ವಿವರಗಳನ್ನೆಲ್ಲ ತನಗೆ ಸಲ್ಲಿಸಬೇಕು ಎಂದು ಸುಪ್ರೀಂಕೋರ್ಟ್ ತನ್ನ ಆದೇಶದಲ್ಲಿ ಹೇಳಿದೆ.

ಇದು ಬಹುತೇಕ, ನ್ಯಾಯಾಂಗವು ಶಾಸಕಾಂಗ-ಕಾರ್ಯಾಂಗದ ಜವಾಬ್ದಾರಿಯನ್ನು ಹೊತ್ತು ನೇರ ಕಾರ್ಯಾಚರಣೆಗೆ ಇಳಿದಂತಾಗಿದೆ. ಇಂತಹ ಸೂಚನೆಗಳು, ಕಾರ್ಯಾಚರಣೆಯ ಮೇಲ್ವಿಚಾರಣೆಗಳನ್ನೆಲ್ಲ ಸುಪ್ರೀಂಕೋರ್ಟೇ ನಿರ್ವಹಿಸಬೇಕೆಂದಾದರೆ, ಇದನ್ನೆಲ್ಲ ನಿಜಕ್ಕೂ ಯೋಜಿಸಿ ಮೇಲೆ ನಿಗಾ ಇರಿಸಿಕೊಳ್ಳಬೇಕಿದ್ದ ಶಾಸಕಾಂಗವಾಗಲೀ ಅಥವಾ ಕಾರ್ಯಾಚರಣೆ ಮಾಡಬೇಕಾಗಿದ್ದ ಕಾರ್ಯಾಂಗವಾಗಲೀ ಸಂಪೂರ್ಣವಾಗಿ ನಿಷ್ಕ್ರಿಯವಾಗಿವೆ ಎಂದೇ ಅರ್ಥವಲ್ಲವೇ? ಹೋಗಲಿ, ಸಾಂವಿಧಾನಿಕ ಹೊಣೆಗಾರಿಕೆ ಇರುವ ಭಾರತೀಯ ರಿಸರ್ವ್ ಬ್ಯಾಂಕ್ ಕೂಡ ಈ ನಿಟ್ಟಿನಲ್ಲಿ ಇನ್ನೂ ನಿಷ್ಕ್ರಿಯವಾಗಿದೆ, ಅದನ್ನೂ ಸುಪ್ರೀಂಕೋರ್ಟ್ ಬಡಿದೆಬ್ಬಿಸಬೇಕಾಗಿದೆ ಎಂಬುದು ದುರ್ದೈವದ ಸಂಗತಿ.

ವೃದ್ಧರು, ಆಧುನಿಕ ತಂತ್ರಜ್ಞಾನಗಳ ಬಗ್ಗೆ ಹೆಚ್ಚಿನ ಅರಿವಿಲ್ಲದ ಮುಗ್ಧರು, ನಿವೃತ್ತ ನೌಕರರಂತಹ ಆಯ್ದ ಜನರನ್ನೇ ಗುರಿಮಾಡಿಕೊಂಡು ನಡೆಯುತ್ತಿರುವ ಈ ಡಿಜಿಟಲ್ ಅರೆಸ್ಟ್ ಎಂಬ ಸೈಬರ್ ಅಪರಾಧ ಸರಣಿ ಆರಂಭಗೊಂಡು ಈಗಾಗಲೇ ಮೂರು ನಾಲ್ಕು ವರ್ಷಗಳು ಕಳೆದಿವೆ. ಇಂತಹ ಜನರ ಆಧಾರ್ ಸಂಖ್ಯೆ, ಫೋನ್ ನಂಬರ್‌ನಂತಹ ಖಾಸಗಿ ಡೇಟಾಗಳು ಈ ಅಪರಾಧಿಗಳಿಗೆ ಹೇಗೆ ಸಿಕ್ಕವು? ಈ ಪ್ರಕರಣಗಳು ಸಾಲುಸಾಲಾಗಿ ನಡೆಯುತ್ತಿದ್ದರೂ, ಸರಕಾರ 2024ರ ತನಕ ಯಾಕೆ ಮೌನ ತಳೆದಿತ್ತು? ಸಂಪೂರ್ಣವಾಗಿ ಅಧಿಕೃತ ಚಾನೆಲ್‌ಗಳ ಮೂಲಕವೇ ನಡೆಯುವ ಈ ಅಪರಾಧವನ್ನು ಸಂಪೂರ್ಣವಾಗಿ ನಿಯಂತ್ರಿಸುವುದು ಭಾರತ ಸರಕಾರದ ಗೃಹ ಇಲಾಖೆಗೆ ಇನ್ನೂ ಯಾಕೆ ಸಾಧ್ಯ ಆಗಿಲ್ಲ? ಬಲಿಪಶುಗಳ ಖಾತೆಯ ಹಣ ಅಧಿಕೃತವಾಗಿ ಬ್ಯಾಂಕ್ ಖಾತೆಗಳಿಗೇ (ಮ್ಯೂಲ್ ಖಾತೆಗಳಿಗೆ) ವರ್ಗಾವಣೆ ಆಗಿ ಅಲ್ಲಿಂದ ದೇಶಾಂತರ ಆಗುತ್ತಿದೆ. ದೇಶಾಂತರ ಆಗಿರುವ ಮೊತ್ತ ತಲುಪಿದ ದೇಶಗಳ ಜೊತೆ ಭಾರತ ಸರಕಾರಕ್ಕೆ ಅಪರಾಧ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಒಪ್ಪಂದಗಳಿಲ್ಲವೇ? ಹಾಗಿದ್ದೂ ಪ್ರಕರಣದ ಮೂಲಕ್ಕೆ ತಲುಪಲು ಯಾಕೆ ಸಾಧ್ಯ ಆಗುತ್ತಿಲ್ಲ? ಡಿಜಿಟಲ್ ಆರ್ಥಿಕತೆ ಇಷ್ಟೊಂದು ವಲ್ನರೆಬಲ್ ಎಂದಾದರೆ, ಅದನ್ನು ಬಲಪಡಿಸದೇ ಪ್ರೋತ್ಸಾಹಿಸುವ ತುರ್ತು ಏನಿದೆ? ಬ್ಯಾಂಕುಗಳಲ್ಲಿ ವ್ಯವಹಾರವೇ ಇಲ್ಲದ ಖಾತೆಗಳಲ್ಲಿ ಏಕಾಏಕಿ ಲಕ್ಷಾಂತರ ರೂ.ಗಳ ವ್ಯವಹಾರ ನಡೆದರೆ, ಅದನ್ನು ಗುರುತಿಸುವ, ನಿಯಂತ್ರಿಸುವ ತಂತ್ರಜ್ಞಾನಕ್ಕೆ ಬ್ಯಾಂಕಿಗ್ ವ್ಯವಸ್ಥೆಯಲ್ಲಿ ಬರವಿದೆಯೆ?... ಇಂತಹ ನೂರಾರು ಪ್ರಶ್ನೆಗಳು ಸಹಜವಾಗಿಯೇ ಹುಟ್ಟಿಕೊಳ್ಳುತ್ತವೆ. ಆದರೆ ಉತ್ತರಿಸುವುದಕ್ಕೆ ಶಾಸಕಾಂಗವಾಗಲೀ, ಕಾರ್ಯಾಂಗವಾಗಲೀ ಮನಸ್ಸು ಮಾಡುತ್ತಿಲ್ಲ.

ಸುಪ್ರೀಂಕೋರ್ಟ್‌ಗೆ ಸಲ್ಲಿಸಿರುವ ವಸ್ತುಸ್ಥಿತಿ ವರದಿಯಲ್ಲಿ 2024ರಲ್ಲಿ 1,23,672 ಡಿಜಿಟಲ್ ಅರೆಸ್ಟ್ ಪ್ರಕರಣಗಳು ದಾಖಲಾಗಿದ್ದರೆ, 2025ರಲ್ಲಿ 58,239 ಪ್ರಕರಣಗಳು ಮತ್ತು 2026 ಜೂನ್ ಅಂತ್ಯಕ್ಕೆ 16,377 ಪ್ರಕರಣಗಳು ದಾಖಲಾಗಿವೆ ಅರ್ಥಾತ್, ಪ್ರಕರಣಗಳ ಪ್ರಮಾಣ ತಗ್ಗುತ್ತಿದೆ ಎಂದು ಹೇಳಲಾಗಿದೆ. ಇಲ್ಲಿಯ ತನಕ ಡಿಜಿಟಲ್ ಅರೆಸ್ಟ್‌ಗಳಲ್ಲಿ ಅಮಾಯಕರ 54,000ಕೋಟಿ ರೂ.ಗಳಿಗೂ ಮಿಕ್ಕಿ ಹಣ ದೋಚಲಾಗಿದ್ದು ಇದನ್ನು ನ್ಯಾಯಾಲಯವೇ ಹಗಲುದರೋಡೆ ಎಂದಿದೆ. ಈ ಪೈಕಿ ಸರಕಾರಕ್ಕೆ ಇಲ್ಲಿಯ ತನಕ ವಾಪಸ್ ವಸೂಲಿ ಮಾಡಿಕೊಳ್ಳಲು ಸಾಧ್ಯ ಆಗಿರುವುದು ಕೇವಲ ಜುಜುಬಿ 18.05 ಕೋಟಿ ರೂ. ಶಾಸಕಾಂಗ ಮತ್ತು ಕಾರ್ಯಾಂಗಗಳ ವೈಫಲ್ಯಕ್ಕೆ ಇದಕ್ಕಿಂತ ಜೀವಂತ ಉದಾಹರಣೆ ಬೇರೆ ಬೇಕಿಲ್ಲ.

ಗಮನಿಸಬೇಕಾದ ಸಂಗತಿ ಎಂದರೆ, ಇವೆಲ್ಲ ಸರಕಾರಿ ವ್ಯವಸ್ಥೆಗೆ ದೂರು ಸಲ್ಲಿಕೆ ಆಗಿರುವ ಅಧಿಕೃತ ಪ್ರಕರಣಗಳು. ಸರಕಾರಿ ವ್ಯವಸ್ಥೆಯ ಗಮನಕ್ಕೇ ಬರದ ಅಸಂಖ್ಯ ಪ್ರಕರಣಗಳೂ ದೇಶದಾದ್ಯಂತ ಇವೆ. ಒಂದಂತೂ ಸ್ಪಷ್ಟ. ಸರಕಾರದ ನಿಯಂತ್ರಣದಲ್ಲಿರುವ ವ್ಯವಸ್ಥೆಯ ಒಳಗೇ ಈ ಗಾತ್ರದಲ್ಲಿ ವಂಚನೆ ಅವ್ಯಾಹತವಾಗಿ ನಡೆಯುತ್ತಿದೆ ಎಂದರೆ, ಇದರಲ್ಲಿ ಒಳಗಿನವರ ಕೈವಾಡಗಳು ಇಲ್ಲ ಎಂಬುದನ್ನು ಸಂಪೂರ್ಣವಾಗಿ ಅಲ್ಲಗಳೆಯುವಂತಿಲ್ಲ. ದೇಶದ ಶಾಸಕಾಂಗ ಮತ್ತು ಕಾರ್ಯಾಂಗಗಳಿಂದ ದೇಶದ ಜನತೆ ಉತ್ತರದಾಯಿತ್ವ ಬಯಸುತ್ತಿದೆ. ಅದನ್ನು ಒದಗಿಸಲಾಗದವರು ಆಡಳಿತಕ್ಕೆ ಅನರ್ಹರು.

ಯುಜಿಸಿ ನಿಯಮಾವಳಿಗೆ ಮತ್ತೆ ವಿರೋಧ; ಪ್ರಬಲ ಜಾತಿಗಳ ಪ್ರತಿಭಟನೆ ಯಾಕೆ?

ವಿಶ್ವವಿದ್ಯಾಲಯ ಧನಸಹಾಯ ಆಯೋಗ () ಜನವರಿಯಲ್ಲಿ ಅಧಿಸೂಚಿಸಿದ ನೂತನ ಸಮಾನತೆ ಮತ್ತು ತಾರತಮ್ಯ ತಡೆ ನಿಯಮಾವಳಿ-2026 ವಿರುದ್ಧ ಮತ್ತೆ ದೇಶಾದ್ಯಂತ ಭಾರೀ ಚರ್ಚೆ ಮತ್ತು ಜಾತಿ ಆಧಾರಿತ ಸಂಘಟನೆಗಳ ತೀವ್ರ ಪ್ರತಿಭಟನೆ ನಡೆಯುತ್ತಿವೆ. ರಾಜಸ್ಥಾನದ ಜೈಪುರದಲ್ಲಿ ರಜಪೂತ ಸಮುದಾಯದ ಪ್ರಭಾವಿ ಸಂಘಟನೆಯಾದ ಕರ್ಣಿ ಸೇನೆ ಆಯೋಜಿಸಿದ್ದ ಬೃಹತ್ ರ್ಯಾಲಿಯಲ್ಲಿ ಹಿಂಸಾಚಾರ ಮತ್ತು ಪೊಲೀಸ್ ಲಾಠಿಚಾರ್ಜ್ ನಡೆದಿದ್ದು, ವ್ಯಕ್ತಿಯೊಬ್ಬರು ಮೃತಪಟ್ಟಿದ್ದಾರೆ. ಅವರ ಸಾವಿನಿಂದಾಗಿ ಈ ವಿವಾದವು ಮತ್ತಷ್ಟು ತೀವ್ರ ಹಂತಕ್ಕೆ ತಲುಪಿದೆ. ಮೃತನ ಕುಟುಂಬಕ್ಕೆ ಪರಿಹಾರ ಮತ್ತು ಸರ್ಕಾರಿ ಉದ್ಯೋಗ ನೀಡಲು ರಾಜ್ಯ ಸರ್ಕಾರ ಸಮ್ಮತಿಸಿದರೂ, ಯುಜಿಸಿ ನಿಯಮಾವಳಿಗಳ ಸುತ್ತಲಿನ ಪ್ರತಿಭಟನೆಗಳು ಮುಂದುವರೆದಿವೆ.

ಯುಜಿಸಿ ನೂತನ ನಿಯಮಗಳಲ್ಲೇನಿದೆ?


ಯುಜಿಸಿ 2026ರ ಜನವರಿ 13ರಂದು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಸಮಾನತೆಯ ಉತ್ತೇಜನ ನಿಯಮಾವಳಿ-2026ಅನ್ನು ಅಧಿಸೂಚಿಸಿತು. ದೇಶದ ಎಲ್ಲ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಧರ್ಮ, ಜನಾಂಗ, ಲಿಂಗ, ಜನ್ಮಸ್ಥಳ, ಜಾತಿ ಅಥವಾ ಅಂಗವಿಕಲತೆಯ ಆಧಾರದ ಮೇಲೆ ನಡೆಯುವ ತಾರತಮ್ಯವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು ಈ ನಿಯಮಗಳ ಪ್ರಮುಖ ಉದ್ದೇಶವಾಗಿದೆ.

ವಿಶೇಷವಾಗಿ ಪರಿಶಿಷ್ಟ ಜಾತಿ , ಪರಿಶಿಷ್ಟ ಪಂಗಡ , ಇತರ ಹಿಂದುಳಿದ ವರ್ಗಗಳು , ಆರ್ಥಿಕವಾಗಿ ಹಿಂದುಳಿದ ವಿಭಾಗಗಳು ಹಾಗೂ ವಿಕಲಚೇತನ ವಿದ್ಯಾರ್ಥಿಗಳ ಹಕ್ಕುಗಳನ್ನು ರಕ್ಷಿಸಲು ವಿಶ್ವವಿದ್ಯಾಲಯಗಳಲ್ಲಿ ಪ್ರತ್ಯೇಕ ಸಮಾನ ಅವಕಾಶ ಕೋಶ ಮತ್ತು ಸಮಾನತೆ ದಳ ಸ್ಥಾಪನೆಯನ್ನು ಈ ಕಾಯಿದೆ ಕಡ್ಡಾಯಗೊಳಿಸಿದೆ. 2012ರಲ್ಲಿ ಜಾರಿಯಲ್ಲಿದ್ದ ಹಳೆಯ ನಿಯಮಗಳಿಗೆ ಹೋಲಿಸಿದರೆ, 2026ರ ನಿಯಮಗಳು ತಾರತಮ್ಯ ಎಸಗುವ ಸಂಸ್ಥೆಗಳ ವಿರುದ್ಧ ಶಿಸ್ತುಕ್ರಮ ಮತ್ತು ಅನುದಾನ ತಡೆಯುವಂತಹ ಕಠಿಣ ಶಿಕ್ಷಾತ್ಮಕ ಅಧಿಕಾರವನ್ನು ಯುಜಿಸಿಗೆ ನೀಡಿವೆ.

ಈ ನಿಯಮಗಳನ್ನು ಜಾರಿಗೆ ತರಲು ಕಾರಣವೇನು?

ಉನ್ನತ ಶಿಕ್ಷಣ ಸಂಸ್ಥೆಗಳು, ಐಐಟಿ, ವೈದ್ಯಕೀಯ ಕಾಲೇಜುಗಳಲ್ಲಿ ಜಾತಿ ಆಧಾರಿತ ತಾರತಮ್ಯ ಇಂದಿಗೂ ತಾಂಡವವಾಡುತ್ತಿದೆ. ಅನೇಕ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಮಾನಸಿಕ ಕಿರುಕುಳ ತಾಳಲಾರದೆ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಇಂತಹ ಜಾತಿ ಆಧಾರಿತ ಕಿರುಕುಳದ ಕಾರಣದಿಂದಾಗಿ 2016ರಲ್ಲಿ ಹೈದರಾಬಾದ್ ವಿಶ್ವವಿದ್ಯಾಲಯದಲ್ಲಿ ರೋಹಿತ್ ವೇಮುಲ ಮತ್ತು 2019ರಲ್ಲಿ ಮುಂಬೈನಲ್ಲಿ ನಡೆದ ಡಾ. ಪಾಯಲ್ ತಡವಿ ಅವರು ಆತ್ಮಹತ್ಯೆ ಮಾಡಿಕೊಂಡಿದ್ದರು. ಈ ಪ್ರಕರಣಗಳು ಇಡೀ ದೇಶವನ್ನೇ ಬೆಚ್ಚಿಬೀಳಿಸಿದ್ದವು.

ಈ ಇಬ್ಬರು ವಿದ್ಯಾರ್ಥಿಗಳ ತಾಯಂದಿರು ಉನ್ನತ ಶಿಕ್ಷಣ



ಸಂಸ್ಥೆಗಳಲ್ಲಿ ಜಾತಿ ತಾರತಮ್ಯ ತಡೆಯಲು ಮತ್ತು 2012ರ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಕೋರಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಸಾರ್ವಜನಿಕ ಹಿತಾಸಕ್ತಿ ಅರ್ಜಿ (ಪಿಐಎಲ್) ಸಲ್ಲಿಸಿದ್ದರು. ಈ ಪಿಐಎಲ್ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ಕ್ಯಾಂಪಸ್‌ಗಳಲ್ಲಿ ವಿದ್ಯಾರ್ಥಿಗಳ ಆತ್ಮಹತ್ಯೆ ತಡೆಯಲು ಮತ್ತು ತಾರತಮ್ಯ ಮುಕ್ತ ವಾತಾವರಣ ನಿರ್ಮಿಸಲು ಕಟ್ಟುನಿಟ್ಟಿನ ಮತ್ತು ಕಡ್ಡಾಯ ನಿಯಮಾವಳಿಗಳನ್ನು ರೂಪಿಸುವಂತೆ ಯುಜಿಸಿಗೆ ನಿರ್ದೇಶನ ನೀಡಿತ್ತು. ಇದರ ಫಲವಾಗಿಯೇ 2026ರ ನೂತನ ನಿಯಮಗಳು ಜನ್ಮತಾಳಿವೆ.

ಸುಪ್ರೀಂ ಕೋರ್ಟ್ ಈ ನಿಯಮಗಳಿಗೆ ತಡೆಯಾಜ್ಞೆ ನೀಡಿದ್ದೇಕೆ?

ನೂತನ ನಿಯಮಾವಳಿಗಳು ಜಾರಿಯಾದ ತಕ್ಷಣವೇ ಅವುಗಳ ಸಂವಿಧಾನಾತ್ಮಕ ಸಿಂಧುತ್ವವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿಗಳು ಸಲ್ಲಿಕೆಯಾದವು. ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರನ್ನೊಳಗೊಂಡ ಪೀಠವು ಜನವರಿ ಕೊನೆಯಲ್ಲಿ ಈ ನಿಯಮಗಳಿಗೆ ಮಧ್ಯಂತರ ತಡೆಯಾಜ್ಞೆ ನೀಡಿತು.

ತಡೆಯಾಜ್ಞೆ ನೀಡುವಾಗ ಮೂರು ಅಂಶಗಳನ್ನು ಕೋರ್ಟ್ ಉಲ್ಲೇಖಿಸಿತು;

ಅಸ್ಪಷ್ಟತೆ ಮತ್ತು ದುರ್ಬಳಕೆಯ ಭೀತಿ: ನೂತನ ನಿಯಮಗಳಲ್ಲಿ ತಾರತಮ್ಯದ ವ್ಯಾಖ್ಯಾನವು ಅತ್ಯಂತ ಅಸ್ಪಷ್ಟವಾಗಿದೆ. ಇದು ಕೇವಲ ಒಂದು ನಿರ್ದಿಷ್ಟ ವರ್ಗಕ್ಕೆ ಮಾತ್ರ ರಕ್ಷಣೆ ನೀಡಿ, ಸಾಮಾನ್ಯ ವರ್ಗದ ವಿದ್ಯಾರ್ಥಿಗಳನ್ನು ತಾರತಮ್ಯದ ದೂರುಗಳಿಂದ ಹೊರಗಿಡುವಂತಿದೆ. ಇದರಿಂದಾಗಿ ನಿಯಮ ದುರ್ಬಳಕೆಯಾಗಿ ಸುಳ್ಳು ದೂರುಗಳು ಹೆಚ್ಚಾಗುವ ಸಾಧ್ಯತೆಯಿದೆ ಎಂದು ಹೇಳಿತು.

ಸಾಮಾಜಿಕ ವಿಭಜನೆಯ ಆತಂಕ: ಕ್ಯಾಂಪಸ್‌ಗಳಲ್ಲಿ ವಿದ್ಯಾರ್ಥಿ ನಿಲಯಗಳು, ತರಗತಿಗಳು ಅಥವಾ ಮಾರ್ಗದರ್ಶನ ಗುಂಪುಗಳ ಹಂಚಿಕೆಯಲ್ಲಿ ಪ್ರತ್ಯೇಕತೆ ಉಂಟಾಗಿ, ವಿದ್ಯಾರ್ಥಿಗಳ ನಡುವೆ ಸೌಹಾರ್ದತೆಯ ಬದಲು ಜಾತಿ ಆಧಾರಿತ ವಿಭಜನೆ ಹೆಚ್ಚಾಗಬಹುದು ಎಂಬ ಕಳವಳ ವ್ಯಕ್ತಪಡಿಸಿತು.

ಹಳೆಯ ನಿಯಮಗಳ ಮರುಜಾರಿ: ನೂತನ ನಿಯಮಗಳನ್ನು ತಡೆಹಿಡಿದ ಸುಪ್ರೀಂ ಕೋರ್ಟ್, ಸಂವಿಧಾನದ ವಿಧಿ 142ರ ಅಡಿಯಲ್ಲಿ ತನ್ನ ವಿಶೇಷ ಅಧಿಕಾರ ಬಳಸಿ, ಮುಂದಿನ ಆದೇಶದವರೆಗೆ 2012ರ ಹಳೆಯ ನಿಯಮಗಳೇ ಜಾರಿಯಲ್ಲಿರಲಿ ಎಂದು ಆದೇಶಿಸಿತು.

ಬಲಿಷ್ಠ ಜಾತಿಗಳ ಪ್ರತಿಭಟನೆ

ರಜಪೂತ ಕರಣಿ ಸೇನೆ, ಪ್ರಬಲ ಜಾತಿಗಳ ವಿದ್ಯಾರ್ಥಿ ಸಂಘಟನೆಗಳು ಹಾಗೂ ಸಮಾನ ಅವಕಾಶ ವಿರೋಧಿ ಗುಂಪುಗಳು ಈ ನಿಯಮಾವಳಿಗಳ ವಿರುದ್ಧ ಬೃಹತ್ ಪ್ರತಿಭಟನೆ ನಡೆಸುತ್ತಿವೆ. ನಂತಹ ಸಾಮಾಜಿಕ ಜಾಲತಾಣ ಅಭಿಯಾನಗಳನ್ನೂ ನಡೆಸುತ್ತಿವೆ.

ಪರಿಶಿಷ್ಟ ಜಾತಿ, ಪಂಗಡ ಹಾಗೂ ಒಬಿಸಿ ವಿದ್ಯಾರ್ಥಿಗಳಿಗೆ ಸಂಪೂರ್ಣ ರಕ್ಷಣೆ ನೀಡುವಾಗ, ಸಾಮಾನ್ಯ ವರ್ಗದ ವಿದ್ಯಾರ್ಥಿಗಳ ವಿರುದ್ಧ ಸುಳ್ಳು ದೂರು ಸಲ್ಲಿಕೆಯಾದರೆ ಅವರ ರಕ್ಷಣೆಗೆ ಅಥವಾ ಸುಳ್ಳು ದೂರುದಾರರ ವಿರುದ್ಧ ಶಿಕ್ಷೆಗೆ ಯಾವುದೇ ಸ್ಪಷ್ಟ ನಿಬಂಧನೆ ಇಲ್ಲದಿರುವುದು ತಮ್ಮಲ್ಲಿ ಆತಂಕ ಹುಟ್ಟುಹಾಕಿದೆ ಎಂದು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಹೇಳಿಕೊಂಡಿದ್ದಾರೆ.


ಆದರೆ, ಭಾರತದ ಶೈಕ್ಷಣಿಕ ಸಂಸ್ಥೆಗಳಲ್ಲಿ ಶತಮಾನಗಳಿಂದಲೂ ಮೇಲ್ವರ್ಗಗಳ ಪ್ರಾಬಲ್ಯವಿದ್ದು, ದಲಿತ, ಬುಡಕಟ್ಟು ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಇಂದಿಗೂ ಜಾತಿ ತಾರತಮ್ಯವನ್ನು ಎದುರಿಸುತ್ತಿದ್ದಾರೆ. ಉನ್ನತ ಶಿಕ್ಷಣಕ್ಕೆ ಪ್ರವೇಶ ದೊರೆತರೂ, ಸಮಾನತೆ ಮತ್ತು ಮುಕ್ತ ಅವಕಾಶಗಳು ದೊರೆಯುತ್ತಿಲ್ಲ; ಆದ್ದರಿಂದ, ಕ್ಯಾಂಪಸ್ ಒಳಗೆ ಅವರಿಗೆ ಸುರಕ್ಷತೆ ಮತ್ತು ಆತ್ಮಗೌರವ ಸಿಗಬೇಕಾದರೆ ಕಾನೂನಾತ್ಮಕ ಕಾವಲು ವ್ಯವಸ್ಥೆ ಅಗತ್ಯ ಎಂಬುದು ಬಹುಜನ ಸಮುದಾಯಗಳ ವಾದವೂ ಆಗಿದೆ.

ಜನ ಗಣ ಮನದ ಜನಕ ರವೀಂದ್ರನಾಥ ಟ್ಯಾಗೋರ್ ಅವರ ಪುಣ್ಯಸ್ಮರಣೆ

ಆಗಸ್ಟ್ 7ರ ಈ ಪುಣ್ಯ ದಿನದಂದು ನಾವು ರಾಷ್ಟ್ರಕವಿ ರವೀಂದ್ರನಾಥ ಟ್ಯಾಗೋರ್ ಅವರಿಗೆ ನಮನ ಸಲ್ಲಿಸೋಣ. ಅವರ ಕನಸಿನ ಭಾರತ ಕಟ್ಟಲು, ಎಲ್ಲಿ ಮನವು ಭಯವಿಲ್ಲದೋ ಎಂಬ ಗೀತಾಂಜಲಿಯ ಸಾಲುಗಳನ್ನು ನಿಜವಾಗಿಸಲು ಪ್ರತಿಜ್ಞೆ ಮಾಡೋಣ. ಕೈಯಲ್ಲಿ ಪೆನ್ನು, ಮುಂದೆ ಗೀತಾಂಜಲಿ, ಹಿನ್ನೆಲೆಯಲ್ಲಿ ಶಾಂತಿನಿಕೇತನದ ನೆನಪುಗಳಿವೆ. ಟ್ಯಾಗೋರ್ ಅವರು ಹೋದರು, ಆದರೆ ಚಿರನೂತನರಾಗಿ ಉಳಿದರು.

ದೇಶದ ರಾಷ್ಟ್ರಗೀತೆಯ ರಚನಾಕಾರ, ವಿಶ್ವಕವಿ, ಮಹಾನ್ ಶಿಕ್ಷಣತಜ್ಞ ರವೀಂದ್ರನಾಥ ಟ್ಯಾಗೋರ್ ಅವರ ಪುಣ್ಯಸ್ಮರಣೆಯ ದಿನವಿದು. 1941ರ ಈ ದಿನದಂದು ಕಲ್ಕತ್ತಾದ ಜೋರಾಸಾಂಕೊ ಮನೆಯಲ್ಲಿ ಅವರು ಇಹಲೋಕ ತ್ಯಜಿಸಿದರು. ಆದರೆ ಅವರ ಚಿಂತನೆ, ಕಾವ್ಯ ಮತ್ತು ಸಂಗೀತ ಇಂದಿಗೂ ಭಾರತದ ಪ್ರತಿ ಉಸಿರಿನಲ್ಲೂ ಜೀವಂತವಾಗಿದೆ.

ಜನ ಗಣ ಮನ ಅಧಿನಾಯಕ ಜಯ ಹೇಯ ಐದು ಸಾಲುಗಳು ಕೇವಲ ಗೀತೆಯಲ್ಲ. ಇದು 140 ಕೋಟಿ ಭಾರತೀಯರ ಆತ್ಮಗೀತೆ. 1911ರ ಡಿಸೆಂಬರ್ 27ರಂದು ಕಲ್ಕತ್ತಾದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದಲ್ಲಿ ಮೊದಲ ಬಾರಿಗೆ ಹಾಡಲಾದ ಈ ಗೀತೆಯನ್ನು,



ಸ್ವಾತಂತ್ರ್ಯಾನಂತರ 1950ರ ಜನವರಿ 24ರಂದು ನಮ್ಮ ಸಂವಿಧಾನ ಸಭೆ ರಾಷ್ಟ್ರಗೀತೆಯಾಗಿ ಅಂಗೀಕರಿಸಿತು.

ಟ್ಯಾಗೋರ್ ಅವರು ಈ ಗೀತೆಯನ್ನು ಬಂಗಾಳಿ ಭಾಷೆಯಲ್ಲಿ ಭಾರತ ಭಾಗ್ಯ ವಿಧಾತ ಎಂದು ಬರೆದರು. ಧರ್ಮ, ಜಾತಿ, ಭಾಷೆ, ಪ್ರಾಂತ್ಯಗಳ ಭೇದ ಮರೆತು ಪಂಜಾಬ ಸಿಂಧು ಗುಜರಾತ ಮರಾಠಾ, ದ್ರಾವಿಡ ಉತ್ಕಲ ವಂಗ ಎಂದು ಇಡೀ ಭಾರತವನ್ನು ಒಂದೇ ಸಾಲಿನಲ್ಲಿ ಕೂರಿಸಿದ ಕವಿ ಅವರು. ತವ ಶುಭ ನಾಮೇ ಜಾಗೇ ಎಂದು ಆರಂಭವಾಗುವ ಪ್ರಾರ್ಥನೆ ಇಂದು ಪ್ರತಿ ಶಾಲೆ, ಸರ್ಕಾರಿ ಕಾರ್ಯಕ್ರಮ, ಕ್ರೀಡಾಂಗಣದಲ್ಲಿ ನಮ್ಮ ಎದೆಯನ್ನು ಉಬ್ಬಿಸುತ್ತದೆ. ವಿಶ್ವದಲ್ಲಿಯೇ ಎರಡು ದೇಶಗಳ ರಾಷ್ಟ್ರಗೀತೆಯನ್ನು ಬರೆದ ಕೀರ್ತಿ ಟ್ಯಾಗೋರ್ ಅವರಿಗೆ ಮಾತ್ರಸಲ್ಲುತ್ತದೆ. ಬಾಂಗ್ಲಾದೇಶದ ಅಮಾರ್ ಶೋನಾರ್ ಬಾಂಗ್ಲಾ ಕೂಡ ಅವರ ರಚನೆಯೇ ಆಗಿದೆ.

1861ರ ಮೇ 7ರಂದು ಕಲ್ಕತ್ತಾದ ಶ್ರೀಮಂತ ಟ್ಯಾಗೋರ್ ಕುಟುಂಬದಲ್ಲಿ ಜನಿಸಿದ ರವೀಂದ್ರನಾಥ ಅವರು, ಬಾಲ್ಯದಿಂದಲೇ ಕವಿತೆ, ಚಿತ್ರ, ಸಂಗೀತದಲ್ಲಿ ತೊಡಗಿದ್ದರು. 8ನೇ ವಯಸ್ಸಿಗೆ ಮೊದಲ ಕವಿತೆ ಬರೆದರು. ಬಳಿಕ 16 ಕಾದಂಬರಿ, 8 ಕಥಾ ಸಂಕಲನ, 2000ಕ್ಕೂ ಹೆಚ್ಚು ಹಾಡುಗಳು, ನೂರಾರು ಪ್ರಬಂಧಗಳು ಅವರ ಸಾಹಿತ್ಯ ಸಾಗರ ಅಪಾರ.

1913ರಲ್ಲಿ ಗೀತಾಂಜಲಿ ಕೃತಿಗೆ ಸಾಹಿತ್ಯದ ನೊಬೆಲ್ ಪ್ರಶಸ್ತಿ ಬಂದಾಗ ಏಷ್ಯಾದಿಂದ ಮೊದಲ ಬಾರಿಗೆ ಈ ಗೌರವ ಪಡೆದವರು ಎಂಬ ಹೆಗ್ಗಳಿಕೆ ಅವರದ್ದಾಯಿತು. ಎಲ್ಲಿಯ ಮನವು ಭಯವಿಲ್ಲದೋ, ಎಲ್ಲಿ ತಲೆ ಉನ್ನತವಾಗಿರುತ್ತದೋ ಎಂದು ಅವರು ಕಂಡ ಕನಸಿನ ಭಾರತ ಇಂದಿಗೂ ನಮ್ಮ ಗುರಿಯಾಗಿದೆ.

ಶಾಂತಿನಿಕೇತನ ಶಿಕ್ಷಣದ ಹೊಸ ಕಲ್ಪನೆ: ಟ್ಯಾಗೋರ್ ಕೇವಲ ಕವಿಯಾಗಿರಲಿಲ್ಲ, ಅವರು ದಾರ್ಶನಿಕ ಶಿಕ್ಷಣತಜ್ಞರು. 1901ರಲ್ಲಿ ಬಂಗಾಳದ ಬೋಲ್‌ಪುರದ ಬಳಿ ಮರಗಳ ನೆರಳಿನಲ್ಲಿ ಶಾಂತಿನಿಕೇತನ ಆರಂಭಿಸಿದರು. ನಾಲ್ಕು ಗೋಡೆಗಳ ತರಗತಿಯಿಂದ ಹೊರಗೆ, ಪ್ರಕೃತಿಯ ಮಡಿಲಲ್ಲಿ ಕಲಿಕೆ ನೀಡುವ ಪರಿಕಲ್ಪನೆ ಅದು. 1921ರಲ್ಲಿ ಇದು ವಿಶ್ವಭಾರತಿ ವಿಶ್ವವಿದ್ಯಾಲಯವಾತು. ಯತ್ರ ವಿಶ್ವಂ ಭವತ್ಯೇಕ ನೀಡಂ ಎಂಬುದು ಇಡೀ ವಿಶ್ವವೇ ಒಂದು ಗೂಡು ಎಂಬ ಅವರ ಆಶಯ ಇಂದಿಗೂ ಆ ವಿಶ್ವವಿದ್ಯಾಲಯದ ಆತ್ಮವಾಗಿದೆ. ಪಾಶ್ಚಿಮಾತ್ಯ ಶಿಕ್ಷಣ ಪದ್ಧತಿಯನ್ನು ಟೀಕಿಸಿದ ಅವರು, ಮಕ್ಕಳಲ್ಲಿ ಸೃಜನಶೀಲತೆ, ಕಲೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಲು ಒತ್ತು ನೀಡಿದರು. ಸಂಗೀತ, ನೃತ್ಯ, ಚಿತ್ರಕಲೆಗೆ ಸಮಾನ ಸ್ಥಾನ ನೀಡಿದರು.

ಮಾನವತೆಯ ಕವಿ ರವೀಂದ್ರನಾಥ ಟ್ಯಾಗೋರ್ ಅವರು ತೀವ್ರ ರಾಷ್ಟ್ರೀಯತಾವಾದಿ ಆಗಿರಲಿಲ್ಲ. ಅವರು ವಿಶ್ವಮಾನವರಾಗಿದ್ದರು. 1919ರ ಜಲಿಯನ್ ವಾಲಾಬಾಗ್ ಹತ್ಯಾಕಾಂಡದ ನಂತರ ಬ್ರಿಟಿಷ್ ಸರ್ಕಾರ ನೀಡಿದ ನೈಟ್ ಪದವಿಯನ್ನು ವಾಪಸ್ ನೀಡಿ ಪ್ರತಿಭಟಿಸಿದರು. ಆದರೆ ದ್ವೇಷದಿಂದಲ್ಲ, ಮಾನವೀಯತೆಯಿಂದ. ನಾನು ಭಾರತೀಯನಾಗಿರುವುದಕ್ಕಿಂತ ಮೊದಲು ಮನುಷ್ಯ ಎಂದು ಹೇಳಿದರು. ಅವರ ಗುರುದೇವ್ ಎಂಬ ಹೆಸರು ಗೌರವದ ಸಂಕೇತವಾಯಿತು. ಮಹಾತ್ಮ ಗಾಂಧೀಜಿಯವರ ಆತ್ಮೀಯರಾಗಿದ್ದ ಅವರು, ಗಾಂಧೀಜಿಯನ್ನು ಮಹಾತ್ಮ ಎಂದು ಕರೆದರು. ಗಾಂಧೀಜಿ ಅವರನ್ನು ಗುರುದೇವ್ ಎಂದು ಸಂಬೋಧಿಸಿದರು.

ಇಂದು 85 ವರ್ಷಗಳ ನಂತರವೂ ಟ್ಯಾಗೋರ್ ನಮ್ಮನ್ನು ಮಾತನಾಡಿಸುತ್ತಾರೆ. ಅವರ ರವೀಂದ್ರ ಸಂಗೀತ ನಮ್ಮ ಬದುಕಿನ ಸಂತೋಷ-ದುಃಖಕ್ಕೆ ಸಾಥ್ ನೀಡುತ್ತದೆ. ಅವರ ಕವಿತೆಗಳು ನಮಗೆ ಸ್ವಾತಂತ್ರ್ಯದ ಅರ್ಥ ಹೇಳುತ್ತವೆ. ಎಲ್ಲಿ ಜ್ಞಾನವು ಮುಕ್ತವಾಗಿರುತ್ತದೋ ಎಂಬ ಅವರ ಪ್ರಾರ್ಥನೆ, ಇಂದಿನ ಶಿಕ್ಷಣ ವ್ಯವಸ್ಥೆಗೆ ದಿಕ್ಸೂಚಿ.

ಟ್ಯಾಗೋರ್ ನಮಗೆ ಕಲಿಸಿದ್ದು ಏನು?

ಭಾಷೆ ಬೇರೆಯಾದರೂ ಭಾವ ಒಂದೇ. ಪ್ರಾಂತ್ಯ ಬೇರೆಯಾದರೂ ರಾಷ್ಟ್ರ ಒಂದೇ. ಮತ ಬೇರೆಯಾದರೂ ಮಾನವತೆ ಒಂದೇ. ಜನ ಗಣ ಮನ ಹಾಡುವಾಗ ನಾವು ಎದ್ದು ನಿಲ್ಲುವುದಷ್ಟೇ ಅಲ್ಲ, ಆ ಸಾಲುಗಳ ಅರ್ಥವನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಆಗಸ್ಟ್ 7ರ ಈ ಪುಣ್ಯ ದಿನದಂದು ನಾವು ರಾಷ್ಟ್ರಕವಿ ರವೀಂದ್ರನಾಥ ಟ್ಯಾಗೋರ್ ಅವರಿಗೆ ನಮನ ಸಲ್ಲಿಸೋಣ. ಅವರ ಕನಸಿನ ಭಾರತ ಕಟ್ಟಲು, ಎಲ್ಲಿ ಮನವು ಭಯವಿಲ್ಲದೋ ಎಂಬ ಗೀತಾಂಜಲಿಯ ಸಾಲುಗಳನ್ನು ನಿಜವಾಗಿಸಲು ಪ್ರತಿಜ್ಞೆ ಮಾಡೋಣ. ಕೈಯಲ್ಲಿ ಪೆನ್ನು, ಮುಂದೆ ಗೀತಾಂಜಲಿ, ಹಿನ್ನೆಲೆಯಲ್ಲಿ ಶಾಂತಿನಿಕೇತನದ ನೆನಪುಗಳಿವೆ. ಟ್ಯಾಗೋರ್ ಅವರು ಹೋದರು, ಆದರೆ ಚಿರನೂತನರಾಗಿ ಉಳಿದರು.

ಬೆಂಗಳೂರಿನ ಪಂಚತಾರಾ ಹೋಟೆಲ್‌ಗಳ ಮೇಲೆ ಆರೋಗ್ಯ ಇಲಾಖೆ ದಾಳಿ: ಅವಧಿ ಮುಗಿದ ಹಾಲು, ಕೊಳೆತ ತರಕಾರಿ ಪತ್ತೆ

ಬೆಂಗಳೂರು: ನಗರದ ಪ್ರತಿಷ್ಠಿತ ಪಂಚತಾರಾ ಹೋಟೆಲ್‌ಗಳ ಮೇಲೆ ಇಂದು ರಾಜ್ಯ ಆರೋಗ್ಯ ಇಲಾಖೆ ಹಾಗೂ ಆಹಾರ ಸುರಕ್ಷತಾ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

30ಕ್ಕೂ ಹೆಚ್ಚು ವಿಶೇಷ ತಂಡಗಳಿಂದ ಏಕಕಾಲಕ್ಕೆ ದಾಳಿ ನಡೆಸಿ ಪರಿಶೀಲನೆ ನಡೆಸಲಾಯಿತು. ಶುಚಿತ್ವ ಮತ್ತು ಆಹಾರದ ಗುಣಮಟ್ಟಕ್ಕೆ ಹೆಸರಾಗಿದ್ದ ಹೋಟೆಲ್‌ಗಳಲ್ಲೂ ಕಳಪೆ ಗುಣಮಟ್ಟದ ಆಹಾರ ಪದಾರ್ಥಗಳು ಮತ್ತು ನೈರ್ಮಲ್ಯದ ಕೊರತೆ ಕಂಡುಬಂದಿದೆ.

ದಾಳಿ ಏಕೆ?: ಆಹಾರ ಸುರಕ್ಷತಾ ನಿಯಮಗಳ ಉಲ್ಲಂಘನೆಯ ಕುರಿತು ಸಾರ್ವಜನಿಕರಿಂದ ಸಾಲು ಸಾಲು ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ, ಆರೋಗ್ಯ ಇಲಾಖೆ ಕಾರ್ಯಾಚರಣೆ ತೀವ್ರಗೊಳಿಸಿದೆ.

ಎಲ್ಲೆಲ್ಲಿ ಪರಿಶೀಲನೆ?: ಹೋಟೆಲ್‌ಗಳ ಅಡುಗೆ ಕೋಣೆ, ಆಹಾರ ಧಾನ್ಯ ಹಾಗೂ ಕಚ್ಚಾವಸ್ತುಗಳನ್ನು ಶೇಖರಿಸಿಡುವ ಕೋಲ್ಡ್ ಸ್ಟೋರೇಜ್ ಮತ್ತು ಗೋದಾಮುಗಳ ಸ್ಥಿತಿಗತಿಯನ್ನು ಅಧಿಕಾರಿಗಳು ಪರಿಶೀಲಿಸಿದರು. ಕೆಲವೆಡೆ ಆಹಾರ ಪದಾರ್ಥಗಳ ಸ್ಥಿತಿಗತಿ ಕಂಡು ಅಧಿಕಾರಿಗಳೇ ಹುಬ್ಬೇರಿಸಿದರು ಎಂದು ತಿಳಿದು ಬಂದಿದೆ.

ಅಧಿಕಾರಿಗಳು ಗಮನಿಸಿದ್ದೇನು?:

ಪ್ರತಿಷ್ಠಿತ ಹೋಟೆಲೊಂದರಲ್ಲಿ ಬಳಕೆಗೆ ಯೋಗ್ಯವಲ್ಲದ, ದಿನಾಂಕ ಮುಗಿದಿರುವ 20 ಲೀಟರ್‌ಗೂ ಹೆಚ್ಚು ಹಾಲು ಪತ್ತೆಯಾಗಿದೆ.

ಇನ್ನು ಕೆಲವೆಡೆ ಕೊಳೆತ ತರಕಾರಿಗಳು, ಆಹಾರದ ಬಣ್ಣ ಹೆಚ್ಚಿಸಲು ಬಳಸುವ ಹಾನಿಕಾರಕ ರಾಸಾಯನಿಕಗಳು, ಕಳಪೆ ಮಟ್ಟದ ಪದಾರ್ಥಗಳೂ ಪತ್ತೆಯಾಗಿವೆ.

ಕಾನೂನು ಕ್ರಮವೇನು?: ರೆಸ್ಟೋರೆಂಟ್, ಹೋಟೆಲ್, ಮತ್ತಿತರ ಆಹಾರ ಪೂರೈಸುವ ಸಂಸ್ಥೆಗಳಲ್ಲಿ ಸುರಕ್ಷತಾ ನಿಯಮಗಳ ಉಲ್ಲಂಘನೆ ಕುರಿತು ಪದೇ ಪದೇ ದೂರುಗಳು ಬರುತ್ತಿರುವ ಹಿನ್ನೆಲೆಯಲ್ಲಿ ತಪಾಸಣೆ ತೀವ್ರಗೊಳಿಸಲು ನಿರ್ಧರಿಸಲಾಗಿದೆ. ಹೋಟೆಲ್‌ಗಳಿಂದ ಆಹಾರದ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಲಾಗುತ್ತದೆ. ವರದಿ ಬಂದ ಬಳಿಕ ನೋಟಿಸ್ ಮತ್ತು ದಂಡ ವಿಧಿಸಲಾಗುತ್ತದೆ ಎಂದು ಆಹಾರ ಸುರಕ್ಷತಾ ಅಧಿಕಾರಿ ಶ್ರೀನಿವಾಸ್ ತಿಳಿಸಿದರು.

ನಾವು ಸೇವಿಸುವ ಆಹಾರದ ಮೇಲೆ ನಮ್ಮ ಆರೋಗ್ಯ ಅವಲಂಬಿತವಾಗಿದೆ - ಯು.ಟಿ ಖಾದರ್

ಅವರವರ ಆರೋಗ್ಯ ಅವರವರ ಕೈಯಲ್ಲಿರುತ್ತದೆ. ನಾವು ಸೇವಿಸುವ ಆಹಾರದ ಮೇಲೆ ಆರೋಗ್ಯ ಅವಲಂಬಿತ ಆಗಿರುವುದರಿಂದ ಉತ್ತಮ ಆಹಾರ ಸೇವನೆ ಮುಖ್ಯ. ಆದ್ದರಿಂದ ಆಹಾರ ಸುರಕ್ಷತಾ ಇಲಾಖೆಯಿಂದ ಇಂದು ಬೆಂಗಳೂರಿನ ಫೈವ್ ಸ್ಟಾರ್ ಹೋಟೆಲ್‌ಗಳಲ್ಲಿ ಪರಿಶೀಲನೆ ನಡೆಸಲಾಗಿದೆ. ಯಾಕೆಂದರೆ ಫೈವ್ ಸ್ಟಾರ್ ಹೋಟೆಲ್‌ಗಳನ್ನೇ ಬಿಡದೆ ತಪಾಸಣೆ ಮಾಡಿದರೆ ಸಣ್ಣಪುಟ್ಟ ಹೋಟೆಲ್‌ಗಳವರು ಸಹ ಪಾಠ ಕಲಿಯುತ್ತಾರೆ. ಆಹಾರ ಪೂರೈಸುವ ದೊಡ್ಡದೊಡ್ಡ ಕಂಪನಿಗಳಿಗೆ ಎಲ್ಲಿಂದ ಸಾಮಗ್ರಿಗಳು ಬರುತ್ತಿವೆ, ಬಣ್ಣ ಬರುತ್ತಿದೆ ಎಂಬ ವಿಚಾರಗಳನ್ನ ತಪಾಸಣೆ ಮಾಡಲೇಬೇಕು. ಗ್ರಾಹಕರಿಗೆ ಉತ್ತಮ ಆಹಾರ ಸಿಗಬೇಕು ಎಂದು ಆರೋಗ್ಯ ಸಚಿವ ಯು.ಟಿ ಖಾದರ್ ತಿಳಿಸಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR